RNI : KARKAN/2023/88973

ಮುಂಜಾನೆ ವಾರ್ತೆ

MUNJANEEVARTHE

ಕನ್ನಡ ದಿನಪತ್ರಿಕೆ

E-Paper : www.munjanevarthe.com

EDITOR : H.L. AMARNATH

VOLUME : 3 ISSUE: 206 ಸಂಪುಟ: 03 ಸಂಚಿಕೆ: 206 ಪುಟಗಳು: 05 munjanevarthe SATURDAY 06 DECEMBER 2025, 06 ಶನಿವಾರ ಡಿಸೆಂಬರ್ 2025 ₹2

ಕಾಂಗ್ರೆಸ್ ಬಣ ಬಡಿದಾಟ: ಧಿಡೀರ್ ದೆಹಲಿಹೆ ತೆರೆಳಿದ ಯಡಿಯೂರಪ್ಪ
ವಿವರಪುಟ 02

ಹಸ್ತಪ್ರತಿ ಉಳಿಸಲು ಕಠಿಣ ಕಾನೂನು ಅಗತ್ಯ: ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್
ವಿವರಪುಟ 03

ಗಂಧದ ಎಣ್ಣೆ ಖರೀದಿಯಲ್ಲಿ ಭಾರಿ ಭ್ರಷ್ಟಾಚಾರ ಅಂಕಿ ಅಂಶಗಳ ಸಮೇತ ಬಯಲಿಗೆಳೆದ ಜೆಡಿಎಸ್ ಶಾಸಕ ಹೆಚ್.ಟಿ.ಮಂಜು
ವಿವರಪುಟ 04

ಅಪ್ರಾಪ್ತರು ಲೀವ್-ಇನ್‌ನಲ್ಲಿರಲು ಕೋರ್ಟ್ ಸಮತಿ

ಜೈಪುರ: ಇಬ್ಬರು ವಯಸ್ಕರು ಮದುವೆಗೆ ಕಾನೂನುಬದ್ಧ ವಯಸ್ಸನ್ನು ತಲುಪಿಲ್ಲದಿದ್ದರೂ ಸಹ, ಪರಸ್ಪರ ಒಪ್ಪಿಗೆಯಿಂದ ಲೀವ್ -ಇನ್ ಸಂಬಂಧದಲ್ಲಿರಲು ಅರ್ಹರು ಎಂದು ರಾಜಸ್ಥಾನ ಹೈಕೋರ್ಟ್ ತೀರ್ಪು ನೀಡಿದೆ. ಕೋಟಾದ 18 ವರ್ಷದ ಯುವತಿ ಮತ್ತು 19 ವರ್ಷದ ಯುವಕ ತಾವು ಸ್ವತಂತ್ರ ಇಚ್ಛೆಯಿಂದ ಒಟ್ಟಿಗೆ ವಾಸಿಸುತ್ತಿದ್ದೇವೆ ಎಂದು ನ್ಯಾಯಾಲಯಕ್ಕೆ ತಿಳಿಸಿದರು. ಮಹಿಳೆಯ ಕುಟುಂಬವು ಈ ಸಂಬಂಧವನ್ನು ವಿರೋಧಿಸಿತು ಮತ್ತು ಅವರನ್ನು ಕೊಲ್ಲುವುದಾಗಿ ಬೆದರಿಕೆ ಹಾಕಿತು ಮತ್ತು ಕೋಟಾ ಪೊಲೀಸರಿಗೆ ನೀಡಿದ ದೂರನ್ನು ಪರಿಗಣಿಸಲಾಗಿಲ್ಲ ಎಂದು ಅರ್ಜಿದಾರರು ಆರೋಪಿಸಿದ್ದರು. ಜೋಡಿ ಸಲ್ಲಿಸಿದ ರಕ್ಷಣೆಗಾಗಿ ಅರ್ಜಿಯನ್ನು ಆಲಿಸಿದ ನ್ಯಾಯಮೂರ್ತಿ ಅನೂಪ್ ಧಂಡ್ ಅವರು, ಈ ಮಹತ್ವದ ತೀರ್ಪು ನೀಡಿದ್ದಾರೆ. ಅರ್ಜಿಯನ್ನು ವಿರೋಧಿಸಿದ ಸಾರ್ವಜನಿಕ ಅಭಿಯೋಜಕ ವಿವೇಕ್ ಚೌಧರಿ, ಪುರುಷನಿಗೆ 21 ವರ್ಷ ವಯಸ್ಸಾಗಿಲ್ಲದ ಕಾರಣ ಈ ಜೋಡಿ ಲೀವ್-ಇನ್ ವ್ಯವಸ್ಥೆಯಲ್ಲಿರಲು ಅವಕಾಶ ನೀಡಬಾರದು ಎಂದು ವಾದಿಸಿದರು. ಅರ್ಜಿದಾರರು ವಿವಾಹವಾಗುವ ವಯಸ್ಸಿನವರಲ್ಲ ಎಂಬ ಕಾರಣಕ್ಕೆ ಸಂವಿಧಾನದ 21ನೇ ವಿಧಿಯ ಅಡಿಯಲ್ಲಿ ಜೀವಿಸುವ ಹಕ್ಕು ಮತ್ತು ವೈಯಕ್ತಿಕ ಸ್ವಾತಂತ್ರ್ಯವನ್ನು ನಿರಾಕರಿಸಲಾಗುವುದಿಲ್ಲ ಎಂದು ನ್ಯಾಯಾಲಯವು ವಾದವನ್ನು ತಳ್ಳಿಹಾಕಿತು.

ಪ್ರತಿಯೊಬ್ಬ ವ್ಯಕ್ತಿಯ ಜೀವನ ಮತ್ತು ಸ್ವಾತಂತ್ರ್ಯವನ್ನು ಕಾಪಾಡುವ ಸಾಂವಿಧಾನಿಕ ಬಾಧ್ಯತೆ ರಾಜ್ಯಕ್ಕೆ ಇದೆ ಎಂದು ನ್ಯಾಯಾಧೀಶರು ಗಮನಿಸಿದರು, ಭಾರತೀಯ ಕಾನೂನಿನಡಿಯಲ್ಲಿ ಲಿವ್-ಇನ್ ಸಂಬಂಧಗಳನ್ನು ನಿಷೇಧಿಸಲಾಗಿಲ್ಲ ಅಥವಾ ಅಪರಾಧೀಕರಿಸಲಾಗಿಲ್ಲ ಎಂದು ಹೇಳಿದರು.

ಅರ್ಜಿಯಲ್ಲಿ ಹೇಳಲಾದ ಸಂಗತಿಗಳನ್ನು ಪರಿಶೀಲಿಸಲು, ಬೆದರಿಕೆ ಗ್ರಹಿಕೆಯನ್ನು ನಿರ್ಣಯಿಸಲು ಮತ್ತು ಅಗತ್ಯವಿದ್ದರೆ ದಂಪತಿಗಳಿಗೆ ಅಗತ್ಯ ರಕ್ಷಣೆಯನ್ನು ಖಚಿತಪಡಿಸಿಕೊಳ್ಳಲು ನ್ಯಾಯಮೂರ್ತಿ ಧಂಡ್ ಭಿಲ್ವಾರಾ ಮತ್ತು ಜೋಧ್‌ಪುರ (ಗ್ರಾಮೀಣ) ಪೊಲೀಸ್ ವರಿಷ್ಠಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಭಾರತ ತಟಸ್ಥವಲ್ಲ, ಶಾಂತಿಯ ಪರ

ನವದೆಹಲಿ: ಭಾರತ ತಟಸ್ಥವಾಗಿಲ್ಲ, ಶಾಂತಿಯ ಪರವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಸ್ಪಷ್ಟಪಡಿಸಿದ್ದಾರೆ. ರಷ್ಯಾ-ಉಕ್ರೇನ್ ಸಂಘರ್ಷವನ್ನು ಉಲ್ಲೇಖಿಸಿ ಅವರು ಈ ಹೇಳಿಕೆ ನೀಡಿದರು. ಸಂಘರ್ಷಕ್ಕೆ ಸೌಹಾರ್ದಯುತ ಪರಿಹಾರವನ್ನು ಕಂಡುಕೊಳ್ಳುವ ಎಲ್ಲಾ

ಪುಟ 2ಕ್ಕೆ

100 ಬಿಲಿಯನ್ ಡಾಲರ್‌ಗೆ ವ್ಯಾಪಾರ ಹೆಚ್ಚಿಸುವ ಗುರಿ

ನವದೆಹಲಿ: ಭಾರತ ಹಾಗೂ ರಷ್ಯಾ ನಡುವಿನ 23ನೇ ಜಂಟಿ ವಾರ್ಷಿಕ ಶೃಂಗಸಭೆ ಭರ್ಜರಿಯಾಗಿ ನಡೆಯಿತು. ಪ್ರಧಾನಿ ನರೇಂದ್ರ ಮೋದಿ ಹಾಗೂ ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ನೇತೃತ್ವದಲ್ಲಿ ತುಂಬಿದ ಗೃಹದಲ್ಲಿ ನಡೆದ ಈ ಸಭೆಯಲ್ಲಿ ಜಾಗತಿಕ ರಾಜಕೀಯ ಅನಿಶ್ಚಿತ ಪರಿಸ್ಥಿತಿಯಲ್ಲಿ ಎರಡೂ ದೇಶಗಳ ನಡುವಿನ ಆರ್ಥಿಕ ಸಂಬಂಧವನ್ನು ಬಲಪಡಿಸಲು ಬದ್ಧತೆ ಇರುವುದನ್ನು ಮೋದಿಯವರು ಸ್ಪಷ್ಟಪಡಿಸಲಾಯಿತು. ಸಭೆ ಬಳಿಕ ಮೋದಿ ಮತ್ತು ಪುಟಿನ್ ಇಬ್ಬರೂ ಜಂಟಿ ಹೇಳಿಕೆ ನೀಡಿ, ತಮ್ಮ ಬದ್ಧತೆಯನ್ನು ಒತ್ತಿ ಹೇಳಿದ್ದಾರೆ.

'ಭಾರತ-ರಷ್ಯಾ: ನಂಬಿಕೆ ಮತ್ತು ಗೌರವದ ತಳಹದಿಯಲ್ಲಿ ದೀರ್ಘ ಸಮಯದ ಪ್ರಗತಿದಾಯಕ ಜೊತೆಗಾರಿಕೆ' ಎನ್ನುವ ಶೀರ್ಷಿಕೆಯಲ್ಲಿ ಬಿಡುಗಡೆ ಇಬ್ಬರೂ ನಾಯಕರು ಜಂಟಿ ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಎರಡು ದೇಶಗಳ ನಡುವಿನ ವ್ಯಾಪಾರ ವಹಿವಾಟನ್ನು 100 ಬಿಲಿಯನ್ ಡಾಲರ್‌ಗೆ ಏರಿಸುವ ಮಹತ್ವಾಕಾಂಕ್ಷೆ ಗುರಿಯನ್ನು ಈ ಹೇಳಿಕೆಯಲ್ಲಿ ನೀಡಲಾಗಿದೆ.

ನಿಮ್ಮೊಂದಿಗೆ ನಾವಿದ್ದೇವೆ

ಭ್ರಷ್ಟಾಚಾರದ ಬಿರುದ್ಧ ನಮ್ಮದು ಅವಿರತ ಹೋರಾಟ. ನಿಮಗೆ ಅಧಿಕಾರಿಗಳ ಕಿರುಕುಳವೇ? ನಿಮ್ಮ ಕೆಲಸಗಳು ಸಕಾಲದಲ್ಲಿ ಆಗುತ್ತಿಲ್ಲವೇ? ಲಂಚ ಕೇಳುತ್ತಿದ್ದಾರೆಯೇ? ಭ್ರಷ್ಟರ ಬಗ್ಗೆ ನಿಮ್ಮಲ್ಲಿ ಮಾಹಿತಿ ಇದೆಯೇ? ನಿಮಗೆ ಸಮಸ್ಯೆಗಳಿವೆಯೇ? ಹಾಗಾದರೆ ನಮ್ಮನ್ನು ಸಂಪರ್ಕಿಸಿ ನಿಮ್ಮ ಹೆಸರನ್ನು ಗೌಪ್ಯವಾಗಿಡಲಾಗುವುದು. ಸೂತ್ರವೆನಿಸಿದರೆ ಪತ್ರಿಕೆಯಲ್ಲಿ ಪ್ರಕಟಿಸಿ ನ್ಯಾಯ ಒದಗಿಸಿಕೊಡಲು ಪ್ರಯತ್ನಿಸಲಾಗುವುದು.

ಸಂಪರ್ಕಿಸಿ: 9663122276

ರೈತರು ಸಮಗ್ರ ಕೃಷಿ ಮತ್ತು ಕೃಷಿ ಉತ್ಪನ್ನಗಳ ಮೌಲ್ಯವರ್ಧನೆಯನ್ನು ಮಾಡಬೇಕು: ಸಿಎಂ

ಮಂಡ್ಯ: ರೈತರು ತಮ್ಮ ವ್ಯವಸಾಯ ಪದ್ಧತಿಯಲ್ಲಿ ಸಮಗ್ರ ಕೃಷಿ ಪದ್ಧತಿಯನ್ನು ಅನುಸರಿಸಬೇಕು ಹಾಗೂ ಉತ್ಪಾದಿಸಿದ ಉತ್ಪನ್ನಗಳನ್ನು ಮೌಲ್ಯವರ್ಧನೆ ಮಾಡಬೇಕು ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಹೇಳಿದರು

ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಪಶು ಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆಗಳು ಜಲಾನಯನ ಅಭಿವೃದ್ಧಿ ಇಲಾಖೆ, ರೇಷ್ಮೆ, ಅರಣ್ಯ, ಮೀನುಗಾರಿಕೆ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ನಬಾರ್ಡ್ ಇವರುಗಳ ಸಂಯುಕ್ತಾಶ್ರಯದಲ್ಲಿ ನಗರದ ವಿ.ಸಿ ಫಾರಂ ಆವರಣದಲ್ಲಿ ಆಯೋಜಿಸ ಲಾಗಿದ್ದ "ಕೃಷಿ

ಮೇಳ 2025" ಸಮಗ್ರ ಕೃಷಿಯಿಂದ ಸುಸ್ಥಿರತೆ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಮಂಡ್ಯದಲ್ಲಿ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯ ಸ್ಥಾಪಿಸಲು ನನ್ನ ಮುಂದೆ ಮೊದಲು ಬೇಡಿಕೆ ಇಟ್ಟವರು ಕೃಷಿ ಸಚಿವರು, ಮಂಡ್ಯ ಮೈಸೂರು ಜಾಮರಾಜನಗರ ಕೊಡಗು ಭಾಗದ ರೈತರಿಗಾಗಿ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯ ಅಗತ್ಯವಿದೆ ಎಂದು ನನಗೂ ಸಹ ತಿಳಿಯಿತು. ನಂತರ ಸದರಿ ವಿಚಾರವನ್ನು ಕ್ಯಾಬಿನೆಟ್ ನಲ್ಲಿ ಚರ್ಚೆ ಮಾಡಿ ಎಲ್ಲಾ ಸಚಿವರ ಒಪ್ಪಿಗೆ ಪಡೆದು ಮಂಡ್ಯದಲ್ಲಿ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾ ನಿಲಯವನ್ನು ಸ್ಥಾಪಿಸಲಾಯಿತು ಎಂದು ಹೇಳಿದರು.

ಮಂಡ್ಯ ಭಾಗದ 5 ಜಿಲ್ಲೆಗಳ ಪ್ರಮುಖ ಬೆಳೆಗಳ ಪ್ರಾತ್ಯಕ್ಷಿಕೆಗಳನ್ನು ಕೃಷಿ ಮೇಳದಲ್ಲಿ ಆಯೋಜಿಸಲಾಗಿದೆ. ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯಗಳು ಅಭಿವೃದ್ಧಿಪಡಿಸಿದ ತಳಿಗಳು ಮತ್ತು ತಂತ್ರಜ್ಞಾನವನ್ನು ತಮ್ಮಲ್ಲಿಗೆ ಇಟ್ಟುಕೊಂಡರೆ ಪ್ರಯೋಜನವಿಲ್ಲ ಅದನ್ನು ರೈತರಿಗೆ ತಲುಪಿಸಬೇಕು ಆಗ ಮಾತ್ರ ರೈತರು ಆರ್ಥಿಕವಾಗಿ ಸುಬಲರಾಗಲು ಸಾಧ್ಯ ವಾಗುತ್ತದೆ. ಭಾರತ ಕೃಷಿ ಪ್ರಧಾನ ಜಿಲ್ಲೆ ಇತ್ತೀಚಿನ ದಿನಗಳಲ್ಲಿ ಕೃಷಿಕರ ಸಂಖ್ಯೆ ಇಳಿಮುಖವಾಗಿದೆ ಎಂದು ಅಭಿಪ್ರಾಯಪಟ್ಟರು.

ಪುಟ 2ಕ್ಕೆ

ವೇಟ್ ಲಿಫ್ಟಿಂಗ್‌ನಲ್ಲಿ ಅಂತಾರಾಷ್ಟ್ರೀಯ ಮಟ್ಟದ ಸಾಧನೆ

ಹಾಸನ: ಇಂಗ್ಲೆಂಡ್ ಕಾಮನ್‌ವೆಲ್ತ್ ಗೇಮ್ಸ್ ಮತ್ತು ಸಿಂಗಾಪುರ ಸೀನಿಯರ್ ನ್ಯಾಷನಲ್ ವೇಟ್ ಲಿಫ್ಟಿಂಗ್ ಸ್ಪರ್ಧೆಯಲ್ಲಿ 3 ಚಿನ್ನ ಮತ್ತು 3 ಕಂಚಿನ ಪದಕ ಗೆದ್ದಿರುವ ಹಾಸನದ ಯುವತಿ ಉಷಾ ಅವರಿಗೆ ರಾಜ್ಯ ಸರ್ಕಾರ 2023ನೇ ಸಾಲಿನ 'ಏಕಲವ್ಯ ಪ್ರಶಸ್ತಿ' ನೀಡಿ ಗೌರವಿಸಿದೆ.

ಬಿ.ಎನ್.ಉಷಾ ಅವರು ಅರಕಲಗೂಡು ತಾಲ್ಲೂಕಿನ ಕೊಣನೂರು ಹೋಬಳಿಯ ಬನ್ನೂರು ಗ್ರಾಮದ ಕೃಷಿಕ ದಂಪತಿ ನಟೇಶ್ ಕುಮಾರ್ ಮತ್ತು ವನಜಾಕ್ಷಿ ದಂಪತಿಯ ಪುತ್ರಿ.

ಉಷಾ ಅವರು ಇಂಗ್ಲೆಂಡ್‌ನಲ್ಲಿ ನಡೆದ ಕಾಮನ್ ವೆಲ್ತ್ ಗೇಮ್ಸ್?ನಲ್ಲಿ 6ನೇ ಸ್ಥಾನ, ಸಿಂಗಾಪುರದಲ್ಲಿ ನಡೆದ ವೇಟ್ ಲಿಫ್ಟಿಂಗ್ ಸ್ಪರ್ಧೆಯಲ್ಲಿ 1 ಚಿನ್ನದ ಪದಕ, ಸೀನಿಯರ್ ನ್ಯಾಷನಲ್ ವೇಟ್ ಲಿಫ್ಟಿಂಗ್‌ನಲ್ಲಿ 3 ಚಿನ್ನ ಮತ್ತು 3 ಕಂಚಿನ ಪದಕಗಳು, ನ್ಯಾಷನಲ್ ಗೇಮ್ಸ್‌ನಲ್ಲಿ 2 ಬೆಳ್ಳಿ, ರಾಜ್ಯ ಮಟ್ಟದ ವೇಟ್ ಲಿಫ್ಟಿಂಗ್ ಚಾಂಪಿಯನ್‌ಷಿಪ್‌ನಲ್ಲಿ 4 ಚಿನ್ನ ಮತ್ತು 1 ಬೆಳ್ಳಿ, ಆಲ್ ಇಂಡಿಯಾ ಇಂಟರ್ ಯೂನಿವರ್ಸಿಟಿ ಸ್ಪರ್ಧೆಯಲ್ಲಿ 1 ಚಿನ್ನದ ಪದಕ ಗೆದ್ದಿದ್ದಾರೆ.

ಸರ್ಕಾರಿ PUC ವಿದ್ಯಾರ್ಥಿಗಳಿಗೆ ಮುಂದಿನ ವರ್ಷದಿಂದ ಉಚಿತ ಪಠ್ಯ ಹಾಗೂ ನೋಟ್ ಬುಕ್ ವಿತರಣೆ

ಶಿವಮೊಗ್ಗ: ಮುಂಬರುವ ಶೈಕ್ಷಣಿಕ ವರ್ಷದಿಂದ ಸರ್ಕಾರಿ ಪಿಯುಸಿ ವಿದ್ಯಾರ್ಥಿಗಳಿಗೂ ಉಚಿತ ಪಠ್ಯದ ಜೊತೆಗೆ ಉಚಿತ ನೋಟ್ ಬುಕ್

ನೀಡಲಾಗುವುದು ಎಂದು ಶಿಕ್ಷಣ ಸಚಿವ ಎಸ್?. ಮಧು ಬಂಗಾರಪ್ಪ ತಿಳಿಸಿದ್ದಾರೆ. ಶಿವಮೊಗ್ಗದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, "ಮುಂಬರುವ ಶೈಕ್ಷಣಿಕ ವರ್ಷದಿಂದ ಸರ್ಕಾರಿ ಒಂದನೇ ತರಗತಿಯಿಂದ ಪಿಯುಸಿವರೆಗೂ ಉಚಿತ ಪಠ್ಯ ಪುಸ್ತಕದ ಜೊತೆಗೆ ಉಚಿತ ನೋಟ್?ಬುಕ್ ವಿತರಿಸಲಾಗುವುದು. ಕೆಪಿಎಸ್ ಶಾಲೆಗಳಲ್ಲಿ ಒಂದನೇ ತರಗತಿಯಿಂದಲೇ

ಪುಟ 2ಕ್ಕೆ

ಒಂದೇ ಕಾರ್ಯಕ್ರಮಕ್ಕೆ ಬೇರೆ ಬೇರೆಯಾಗಿ ಬಂದ ಸಿಎಂ, ಡಿಸಿಎಂ

ಬೆಂಗಳೂರು, ಡಿ.5- ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿಗಾಗಿ ನಿರ್ಮಿಸಲಾಗಿರುವ ನೂತನ ಕಟ್ಟಡ ಉದ್ಘಾಟನೆಗೆ ಮುಖ್ಯಮಂತ್ರಿ ಮತ್ತು ಉಪಮುಖ್ಯ ಮಂತ್ರಿಯವರು ಬೇರೆ ಬೇರೆಯಾಗಿ ಆಗಮಿಸಿದ್ದರು ಕೂಡ, ಪರಸ್ಪರ ಒಬ್ಬರನೊಬ್ಬರು ವಿಚಾರಿಸಿ ಕೊಂಡಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮಂಡ್ಯ ಜಿಲ್ಲೆಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆಯಲ್ಲಿ ಭಾಗವಹಿಸಲು ತೆರಳಬೇಕಿತ್ತು. ಈ ಕಾರಣಕ್ಕೆ ನಿಗದಿತ ಸಮಯಕ್ಕೆ ಸರಿಯಾಗಿ ಸಿದ್ದರಾಮಯ್ಯ ಕಾರ್ಯಕ್ರಮಕ್ಕೆ ಆಗಮಿಸಿದ್ದರು. ಅವರನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರು ಹೂಗುಚ್ಛ ನೀಡಿ ಸ್ವಾಗತಿಸಿದರು.

ಈ ವೇಳೆ ಸಿದ್ದರಾಮಯ್ಯ ಅವರು, ಡಿಸಿಎಂ ಬರುವುದಿಲ್ಲವೇ ಎಂದು ವಿಚಾರಿಸಿದ್ದಾರೆ. ಉಪಮುಖ್ಯ ಮಂತ್ರಿಗಳು ತಡವಾಗಿ ಬರುತ್ತಾರೆ ಎಂದು ಎಂ.ಬಿ.ಪಾಟೀಲ್ ಹೇಳಿದ್ದಾರೆ. ಉಪಮುಖ್ಯ ಮಂತ್ರಿ ಯವರು ಬರುವವರೆಗೂ ಸ್ವಲ್ಪ ಹೊತ್ತು ನಿರೀಕ್ಷೆ ಮಾಡಲು ಎಂ.ಬಿ.ಪಾಟೀಲ್ ಸಲಹೆ ನೀಡಿದ್ದಾರೆ. ಅದಕ್ಕೆ ಸಮತಿಸಿದ್ದ ಮುಖ್ಯಮಂತ್ರಿ ಯವರು ಕಚೇರಿಯಲ್ಲಿ ಕುಳಿತುಕೊಳ್ಳಲು ಮುಂದಡಿ ಇಡುವಾಗ, ಹಿರಿಯ ಶಾಸಕ ಆರ್.ವಿ.ದೇಶಪಾಂಡೆ ಅವರು, ಡಿ.ಕೆ.ಶಿವಕುಮಾರ್ ಬರುತ್ತಾರೆ ನೀವು ಉದ್ಘಾಟನೆ ಮಾಡಿ ಎಂದು ಸಲಹೆ ನೀಡಿದ್ದಾರೆ.

ಹಾಮಾನ ವೈಪರೀತ್ಯದಿಂದಾಗಿ ಮಂಡ್ಯ ಜಿಲ್ಲೆಗೆ ಹೆಲಿಕ್ಯಾಪ್ಟರ್ ಬದಲಾಗಿ ರಸ್ತೆ ಮಾರ್ಗವಾಗಿ ಪ್ರಯಾಣಿಸಬೇಕಾಗುತ್ತದೆ. ಡಿಸಿಎಂ ಅವರನ್ನು ಕಾಯ್ದುಕುಳಿತುಕೊಂಡರೆ ಸಮಯವಾಗುತ್ತದೆ ಎಂದು ಮುಖ್ಯಮಂತ್ರಿ ಅವರ ಸಿಬ್ಬಂದಿಗಳು ಸಲಹೆ ನೀಡಿದ್ದಾರೆ.

ಸಮಯದ ಕೊರತೆಯ ಕಾರಣಕ್ಕೆ ಮುಖ್ಯಮಂತ್ರಿಯವರು ಡಿ.ಕೆ.ಶಿವಕುಮಾರ್ ಅವರ

ಅನುಪಸ್ಥಿತಿಯಲ್ಲಿ ಕಾರ್ಯಕ್ರಮ ಉದ್ಘಾಟನೆ ಮಾಡಿ ತೆರಳಿದರು.

ಮುಖ್ಯಮಂತ್ರಿಯವರು ನಿರ್ಗಮಿಸಿದ ಬೆನ್ನಲ್ಲೇ ಆಗಮಿಸಿದ ಡಿ.ಕೆ.ಶಿವಕುಮಾರ್, ಮುಖ್ಯಮಂತ್ರಿ ಯವರು ಬಂದು ಹೋದರೆ ಎಂದು ಪ್ರಶ್ನಿಸಿದ್ದಾರೆ. ಸಮಯ ಆಗಿತ್ತು ಹಾಗಾಗಿ ಅವರು ಹೊರಟರು ಎಂದು ಆರ್.ವಿ.ದೇಶಪಾಂಡೆ ಹೇಳಿದ್ದಾರೆ.

ಉಭಯ ಕುಶಲೋಪರಿ ಬಳಿಕ ಡಿ.ಕೆ.ಶಿವಕುಮಾರ್, ಈಗ ಕೆ ಐ ಎ ಡಿ ಬಿ ಗೆ ನಿರ್ಮಿಸಲಾಗಿರುವ ನೂತನ ಕಚೇರಿ ಪಕ್ಕದಲ್ಲೇ ಇದ್ದ ಮನೆಯಲ್ಲಿ ಈ ಹಿಂದೆ ತಾವು ವಾಸ ಇದಿದ್ದಾಗಿ ಹೇಳಿದ್ದಾರೆ. ತಾವು ಅದೇ ಮನೆ ಯಲ್ಲಿದ್ದಾಗಲೇ ಮದುವೆ ಯಾಗಿದ್ದಾಗಿಯೂ ತಿಳಿಸಿದರು. ಮುಖ್ಯಮಂತ್ರಿ ಹಾಗೂ ಉಪಮುಖ್ಯ ಮಂತ್ರಿಯವರು ಪ್ರತ್ಯೇಕವಾಗಿ ಕಾರ್ಯಕ್ರಮಕ್ಕೆ ಬಂದಿದ್ದರೂ ಕೂಡ ಪರಸ್ಪರ ಒಬ್ಬರನ್ನೊಬ್ಬರು ವಿಚಾರಿಸುವ ಮೂಲಕ ಆತ್ಮೀಯತೆಯನ್ನು ಮುಂದುವರೆಸಿದ್ದಾರೆ.

ಗುಡ್ಡಾಟ ನಡೆಯುತ್ತಿದ್ದಾಗ ಇಂತಹ ಅನ್ಯೋನ್ಯತೆ ಕಂಡು ಬರುತ್ತಿರಲಿಲ್ಲ. ಉಜಾಹಾರಕೂಟದ ಬಳಿಕ ಇಬ್ಬರ ನಡುವೆ ಸಂಬಂಧ ಸುಧಾರಿಸಿದಂತೆ ಕಂಡು ಬರುತ್ತಿದೆ.

ಸೈಬರ್ ಕ್ರೈಂ ತಡೆಗೆ ಕರ್ನಾಟಕದ ದಿಟ್ಟ ಹೆಜ್ಜೆ

2025ರಲ್ಲಿ ಕೇಸ್‌ಗಳ ಸಂಖ್ಯೆ 13,000ಕ್ಕೆ ಇಳಿಕೆ

ಬೆಂಗಳೂರು: ದೇಶದಲ್ಲಿ ಸೈಬರ್ ಕ್ರೈಂ ಪ್ರಕರಣಗಳು ಮೇಲಿಂದ ಮೇಲೆ ಏರಿಯಾಗುತ್ತಿವೆ. ಬಹುತೇಕ ವಿದ್ಯಾವಂತರೇ ಇಂತಹ ಕೇಸ್‌ಗಳಲ್ಲಿ ಸಂತ್ರಸ್ತರಾಗುತ್ತಿದ್ದು, ಡಿಜಿಟಲ್ ಅರೆಸ್ಟ್ ಮತ್ತು ಟ್ರೇಡಿಂಗ್ ಹೆಸರಿನಲ್ಲಿ ವಂಚನೆಗೆ ಒಳಗಾಗುತ್ತಿದ್ದಾರೆ. ಈ ನಡುವೆ ಕರ್ನಾಟಕದಲ್ಲಿ ಡಿಜಿಟಲ್ ವಂಚನೆ ಪ್ರಕರಣಗಳಲ್ಲಿ ಗಣನೀಯ ಇಳಿಕೆ ಕಂಡುಬಂದಿದೆ. ಈ ಬಗ್ಗೆ ಸ್ವತಃ ಗೃಹ ಸಚಿವ ಪರಮೇಶ್ವರ್ ಅವರೇ ಅಂಕಿ-ಅಂಶ ಬಿಚ್ಚಿಟ್ಟಿದ್ದು, 2025ರಲ್ಲಿ ದಾಖಲಾದ ಪ್ರಕರಣಗಳ ಬಗ್ಗೆ ಉಲ್ಲೇಖಿಸಿದ್ದಾರೆ.

ಹೆಚ್ಚಿತ್ತಿರುವ ಸೈಬರ್ ಅಪರಾಧಗಳ ತಡೆಗೆ ದೇಶದಲ್ಲಿಯೇ ಮೊಟ್ಟ ಮೊದಲಬಾರಿಗೆ ಸೈಬರ್ ಕ್ರೈಮ್ ವಿಭಾಗಕ್ಕೆ ಕರ್ನಾಟಕದಲ್ಲಿ ಡಿಜಿಪಿ ನೇಮಕ ಮಾಡಲಾಗಿದೆ. ಸೆನ್ ಠಾಣೆಗಳನ್ನು ಮಾಡಿದ ಬಳಿಕ ಆನ್‌ಲೈನ್ ವಂಚನೆಗಳ ಬಗ್ಗೆ ದಾಖಲಾಗುತ್ತಿರುವ ಕೇಸ್‌ಗಳೂ ಹೆಚ್ಚಾಗಿವೆ. ಅಮೆರಿಕದಲ್ಲಿ ಇದ್ದವರನ್ನು ಡಿಜಿಟಲ್ ಅರೆಸ್ಟ್ ಮಾಡಿ ಅವರ ಅಕೌಂಟ್‌ನಿಂದ ಹಣ ತೆಗೆಯುತ್ತಿದ್ದರೂಹ ಡಿಜಿಟಲ್ ವಂಚಕರನ್ನೂ ಕರ್ನಾಟಕ ಪೊಲೀಸರು ಬಂಧಿಸಿದ್ದಾರೆ. ಇದೆಲ್ಲದರ ಪರಿಣಾಮವಾಗಿ ಪ್ರಸ್ತುತ ವರ್ಷ ರಾಜ್ಯದಲ್ಲಿ ಸೈಬರ್ ಕ್ರೈಮ್ ಪ್ರಕರಣಗಳು 13,000ಕ್ಕೆ ಇಳಿದಿವೆ ಎಂದು ಗೃಹ ಸಚಿವರು ತಿಳಿಸಿದ್ದಾರೆ.

ಯಾವ್ಯಾವ ವರ್ಷ ಎಷ್ಟು ಪ್ರಕರಣ?

ವರ್ಷ	ಪ್ರಕರಣ
2022	12,550
2023	21,903
2024	21,995
2025	13,000

ಕಳೆದ ವರ್ಷಕ್ಕೆ ಹೋಲಿಸಿದರೆ 2025ರಲ್ಲಿ ಸುಮಾರು 9 ಸಾವಿರದಷ್ಟು ಸೈಬರ್ ಅಪರಾಧ ಪ್ರಕರಣಗಳು ಇಳಿಕೆಯಾಗಿವೆ.

ಆನ್‌ಲೈನ್ ವಂಚನೆಗೆ ಒಳಗಾದ ಸಂತ್ರಸ್ತರು 1930 ಸಂಖ್ಯೆಗೆ ಸ

ಭಾರತ ತಟಸ್ಥವಲ್ಲ, ಶಾಂತಿಯ ಪರ

ಪುಟ 1ರಿಂದ

ಶಾಂತಿ ಪ್ರಯತ್ನಗಳಲ್ಲಿ ಭಾರತವೂ ಹೆಗಲಿಗೆ ಹೆಗಲು ಕೊಟ್ಟು ನಿಲ್ಲುತ್ತದೆ ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರಿಗೆ ಮೋದಿ ತಿಳಿಸಿದರು.

ಉಕ್ರೇನ್ ಸಂಘರ್ಷ ಆರಂಭವಾದ ನಂತರ ನಾವು ಚರ್ಚೆಗಳನ್ನು ನಡೆಸುತ್ತಿದ್ದೇವೆ. ಆಪ್ತ ಸ್ನೇಹಿತನಾಗಿ, ನೀವು ಪರಿಸ್ಥಿತಿಯ ಬಗ್ಗೆ ಆಗಾಗ ನಮಗೆ ತಿಳಿಸುತ್ತಿದ್ದಿರಿ. ನಂಬಿಕೆ ಒಂದು ಪ್ರಮುಖ ಶಕ್ತಿ ಎಂದು ನಾನು ಭಾವಿಸುತ್ತೇನೆ. ನಾವೆಲ್ಲರೂ ಶಾಂತಿಯ ಮಾರ್ಗವನ್ನು ಕಂಡುಕೊಳ್ಳಬೇಕು. ಇತ್ತೀಚಿನ ಪ್ರಯತ್ನಗಳ ಬಗ್ಗೆ ನನಗೆ ತಿಳಿದಿದೆ ಮತ್ತು ಜಗತ್ತು ಶಾಂತಿಯತ್ತ ಹೆಜ್ಜೆ ಹಾಕುತ್ತದೆ ಎಂಬ ವಿಶ್ವಾಸ ನನಗಿದೆ ಎಂದು ಮೋದಿ ಹೇಳಿದ್ದಾರೆ.

ಇದಕ್ಕೆ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಮಾಸ್ಕೋ ಸಂಘರ್ಷವನ್ನು ಶಾಂತಿಯುತವಾಗಿ ಪರಿಹರಿಸಿಕೊಳ್ಳಲು ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಭೌಗೋಳಿಕ ರಾಜಕೀಯ ಪರಿಸ್ಥಿತಿ ಮತ್ತು ಉದ್ವಿಗ್ನತೆಗಳ ನಡುವೆಯೂ ಸುಮಾರು ಎಂಟು ದಶಕಗಳ ದ್ವಿಪಕ್ಷೀಯ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಗುರಿ ಹೊಂದಿರುವ ಉಭಯ ನಾಯಕರ ನಡುವಿನ ವಾರ್ಷಿಕ ಶೃಂಗಸಭೆಯ ಮಾತುಕತೆಯಲ್ಲಿ ಉಕ್ರೇನ್ ವಿಷಯವೂ ಪ್ರಮುಖವಾಗಿದೆ.

ಇದಕ್ಕೂ ಮೊದಲು, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಗುರುವಾರ ಸಂಜೆ ಭಾರತಕ್ಕೆ ಆಗಮಿಸಿದರು. ಎರಡು ದಿನಗಳ ಭೇಟಿಗಾಗಿ ನವದೆಹಲಿಯ ಪಾಲಂ ವಿಮಾನ ನಿಲ್ದಾಣಕ್ಕೆ ಬಂದಿಳಿದ ಅವರನ್ನು ಪ್ರಧಾನಿ ಮೋದಿ ಸ್ವಾಗತಿಸಿದರು. ಪ್ರಧಾನಿ ವೈಯಕ್ತಿಕವಾಗಿ ವಿಮಾನ ನಿಲ್ದಾಣಕ್ಕೆ ತೆರಳಿ ರಷ್ಯಾ ಅಧ್ಯಕ್ಷರನ್ನು ಬರಮಾಡಿಕೊಂಡರು. ಫೆಬ್ರವರಿ 2022 ರಲ್ಲಿ ಪ್ರಾರಂಭವಾದ ರಷ್ಯಾ – ಉಕ್ರೇನ್ ಸಂಘರ್ಷದ ನಂತರ ಇದು ರಷ್ಯಾ ಅಧ್ಯಕ್ಷರ ಮೊದಲ ಭಾರತ ಪ್ರವಾಸವಾಗಿದೆ.

ಪುಟಿನ್‌ಗೆ ಭಗವದ್ಗೀತೆ ಉಡುಗೊರೆ: ರಷ್ಯನ್ ಭಾಷೆಯ ಭಗವದ್ಗೀತೆಯ ಪ್ರತಿಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರಿಗೆ ಉಡುಗೊರೆಯಾಗಿ ನೀಡಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಮೋದಿ, ಗೀತೆಯ ಪ್ರತಿಯನ್ನು ರಷ್ಯಾ ಅಧ್ಯಕ್ಷ ಪುಟಿನ್ ಅವರಿಗೆ ನೀಡಿದ್ದೇನೆ. ಗೀತೆಯ ಬೋಧನೆಗಳು ಜಗತ್ತಿನ ಲಕ್ಷಾಂತರ ಜನರಿಗೆ ಸ್ಫೂರ್ತಿ ತುಂಬಿವೆ ಎಂದು ತಿಳಿಸಿದ್ದಾರೆ.

ರಷ್ಯಾ ಅಧ್ಯಕ್ಷರಿಗೆ ಔಪಚಾರಿಕ ಸ್ವಾಗತ: ಭಾರತಕ್ಕೆ ಬಂದಿಳಿದಿರುವ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಇಂದು 23ನೇ ಭಾರತ – ರಷ್ಯಾ ವಾರ್ಷಿಕ ಶೃಂಗಸಭೆಯಲ್ಲಿ ಭಾಗಿಯಾಗುವುದಕ್ಕೂ ಮುನ್ನ ಅವರಿಗೆ ರಾಷ್ಟ್ರಪತಿ ಭವನದ ಅಂಗಳದಲ್ಲಿ ಔಪಚಾರಿಕ ಸ್ವಾಗತ ನೀಡಲಾಯಿತು.

ರಾಷ್ಟ್ರಪತಿ ಭವನಕ್ಕೆ ಆಗಮಿಸಿದ ಪುಟಿನ್ ಅವರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಸ್ವಾಗತಿಸಿದರು. ಈ ವೇಳೆ ಭಾರತೀಯ ಮತ್ತು ರಷ್ಯಾದ ರಾಷ್ಟ್ರಗೀತೆಗಳನ್ನು ಹಾಡಲಾಯಿತು. ಮೂರು ಸೇನಾಪಡೆಗಳ ವಿಧ್ಯುಕ್ತ ಗೌರವವನ್ನು ಪುಟಿನ್ ಸ್ವೀಕರಿಸಿದರು.

ಬಳಿಕ ಪುಟಿನ್ ರಾಜ್‌ಘಾಟ್‌ನಲ್ಲಿ ಮಹಾತ್ಮ ಗಾಂಧಿ ಸಮಾಧಿಗೆ ಪುಷ್ಪಗುಚ್ಛ ಇರಿಸಿ ಗೌರವ ಸಲ್ಲಿಸಿದರು. ನಂತರ ಸಂದರ್ಶಕರ ಪುಸ್ತಕದಲ್ಲಿ ಸಹಿ ಹಾಕಿದರು. ಇದಾದ ಬಳಿಕ ಹೈದರಾಬಾದ್ ಹೌಸ್‌ನಲ್ಲಿ ಆಯೋಜನೆಗೊಂಡಿರುವ ಶೃಂಗಸಭೆಯಲ್ಲಿ ಭಾಗಿಯಾಗಲು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ತೆರಳಿದರು.

ಕಾಂಗ್ರೆಸ್ ಬಣ ಬಡಿದಾಟ: ಧಿಡೀರ್ ದೆಹಲಿಹೆ ತೆರೆಳಿದ ಯಡಿಯೂರಪ್ಪ

ಬೆಂಗಳೂರು: ಒಂದು ಕಡೆ ಬಿಜೆಪಿ ಭಿನ್ನಮತೀಯ ನಾಯಕರು ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರ ಬದಲಾವಣೆಗೆ ಪಟ್ಟು ಹಿಡಿದಿರುವ ಬೆನ್ನಲ್ಲೇ, ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಅವರು ಇದೀಗ ತಮ್ಮ ಪುತ್ರರ ರಾಜಕೀಯ ಭವಿಷ್ಯವನ್ನು ಗಟ್ಟಿಗೊಳಿಸಲು ಬಹಿರಂಗವಾಗಿಯೇ ಅಖಾಡಕ್ಕೆ ಧುಮುಕಿದ್ದಾರೆ.

ಯಾವುದೇ ಅಧಿಕೃತ ಕಾರ್ಯಕ್ರಮವು ಇಲ್ಲದಿದ್ದರೂ ಯಡಿಯೂರಪ್ಪ ಅವರು ಏಕಾಏಕಿ ದೆಹಲಿಗೆ ತೆರಳಿರುವುದು ಸಾಕಷ್ಟು ಕುತೂಹಲ ಮೂಡಿಸಿದೆ. ದೆಹಲಿಯಲ್ಲಿ ಬಿಜೆಪಿ ವರಿಷ್ಠರ ಭೇಟಿಗೆ ತೆರಳಿರುವ ಅವರು ಕರ್ನಾಟಕದ ಬೆಳವಣಿಗೆಗಳ ಕುರಿತಂತೆ, ಚರ್ಚೆ ನಡೆಸಿ ತಮ ಪುತ್ರ ವಿಜಯೇಂದ್ರ ಪರ ಲಾಭಿ ನಡೆಸಲಿದ್ದಾರೆ ಎನ್ನಲಾಗಿದೆ.

ಇನ್ನೊಂದು ಮೂಲಗಳ ಪ್ರಕಾರ ಕರ್ನಾಟಕದಲ್ಲಿ ಮುಖ್ಯಮಂತ್ರಿ ಕುರ್ಚಿಗಾಗಿ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಬಣಗಳ ನಡುವೆ ಬಹಿರಂಗವಾಗಿ ಕುತ್ತಿ ನಡೆಯುತ್ತಿದ್ದು ಇದರ ಬಗ್ಗೆ ದೆಹಲಿ ವರಿಷ್ಠರು ಮಾಹಿತಿ ಪಡೆಯಿದ್ದಾರೆ ಎಂದು ಗೊತ್ತಾಗಿದೆ. ಕರ್ನಾಟಕದ ಬೆಳವಣಿಗೆಗಳ ಕುರಿತು ಸಮಗ್ರ ವರದಿ ನೀಡಬೇಕೆಂದು ಕೆಲ ದಿನಗಳ ಹಿಂದೆ ದೆಹಲಿ ವರಿಷ್ಠರಿಂದ ಮೌಖಿಕ ಸೂಚನೆ ಬಂದಿತ್ತು. ತವುದೇ ಆದ ಆಪ್ತ ಮೂಲಗಳಿಂದ ಮಾಹಿತಿಯನ್ನು ಕಲೆ ಹಾಕಿರುವ ಅವರು, ಕಾಂಗ್ರೆಸ್ಸು ಬಣ ಬಡಿದಾಟದ ಕುರಿತು ಕೇಂದ್ರ ಗಹ ಸಚಿವ ಅಮಿತ್ ಶಾ ಅವರಿಗೆ ರಹಸ್ಯ ವರದಿಯನ್ನು ನೀಡಲಿದ್ದಾರೆ ಎಂದು ತಿಳಿದು ಬಂದಿದೆ.

ಇನ್ನೊಂದು ಮೂಲಗಳ ಪ್ರಕಾರ, ದೆಹಲಿಯಲ್ಲಿ ಮಾಜಿ ಸಚಿವ ರಮೇಶ್ ಜಾರಕಿಹೊಳಿ ನೇತತ್ವದ ತಂಡ ಪಕ್ಷದ ಕೆಲವು ವರಿಷ್ಠರನ್ನು ಭೇಟಿಯಾಗಿ ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷ ಸ್ಥಾನದಿಂದ ಬದಲಾಯಿಸಿ ಪಕ್ಷ ಮತ್ತು ಸಂಘ ಪರಿವಾರ ಹಿನ್ನೆಲೆಯುಳ್ಳವರನ್ನು ನೇಮಕ ಮಾಡಬೇಕೆಂದು ಪಟ್ಟು ಹಿಡಿದಿದ್ದು, ರಾಜ್ಯ ಉಸ್ತುವಾರಿ ಡಾ.ರಾಧ ಮೋಹನ್ ಅಗರ್‌ವಾಲ್ ಸೇರಿದಂತೆ ದೆಹಲಿಯಲ್ಲಿ ಕೆಲವು ಪ್ರಮುಖರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಇದರಿಂದ ತುಸು ಅಧೀರರಾದಂತೆ ಕಂಡುಬಂದಿರುವ ಯಡಿಯೂರಪ್ಪ ಪುತ್ರನ ರಾಜಕೀಯ ಭವಿಷ್ಯವನ್ನು ಮತ್ತಷ್ಟು ಗಟ್ಟಿಗೊಳಿಸಲು ದೆಹಲಿಗೆ ದೌಡಾಯಿಸಿದ್ದಾರೆ ಎನ್ನಲಾಗುತ್ತಿದೆ.

ಬಿಜೆಪಿಯಲ್ಲಿ ಈಗಲೂ ಯಡಿಯೂರಪ್ಪ ಮಾತಿಗೆ ತೂಕವಿದೆ. ಯಾವುದೇ ಪ್ರಮುಖ ನೇಮಕಾತಿ ಸೇರಿದಂತೆ ಕೆಲವು ಮಹತ್ವದ ವಿಷಯಗಳಲ್ಲಿ ಅವರ ಮಾತನ್ನು ಪಕ್ಷದ ವರಿಷ್ಠರು ತೆಗೆದು ಹಾಕುವುದಿಲ್ಲ. ಕರ್ನಾಟಕಕ್ಕೆ ಯಾವುದೇ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಆಯ್ಕೆ ಮಾಡಬಹುದೆಂಬ ಸುಳಿವು ಅರಿತೇ ಯಡಿಯೂರಪ್ಪ ದೆಹಲಿಗೆ ಬಂದಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಈ ಬಗ್ಗೆ ಯಾವುದೇ ಗುಟ್ಟು ಬಿಟ್ಟು ಕೊಡದ ಅವರ ಆಪ್ತರು, ಇದೊಂದು ಖಾಸಗಿ ಭೇಟಿ ಎಂದು ತೇಪೆ ಹಚ್ಚುವ ಕೆಲಸ ಮಾಡುತ್ತಿದ್ದಾರೆ. ಪ್ರಸ್ತುತ ಸಂಸತ್ ಅಧಿವೇಶನ ನಡೆಯುತ್ತಿರುವ ಸಂದರ್ಭದಲ್ಲಿ ಬಿಎಸ್ ವೈ ಕೆಲವು ಪ್ರಮುಖ ನಾಯಕರನ್ನು ಭೇಟಿ ಮಾಡಿ ಕರ್ನಾಟಕದ ಬಿಜೆಪಿ ಅಧ್ಯಕ್ಷ ಸ್ಥಾನವನ್ನು ಅಧಿಕೃತವಾಗಿ ಘೋಷಣೆ ಮಾಡುವಂತೆ ಮನವಿ ಮಾಡಲಿದ್ದಾರೆ.

ಕನಿಷ್ಠಪಕ್ಷ ಮೂರು ವರ್ಷಗಳ ಅವಧಿಗೆ ವಿಜಯೇಂದ್ರ ಅವರನ್ನು ಅಧ್ಯಕ್ಷರಾಗಿ ಘೋಷಣೆ ಮಾಡುವಂತೆ ವರಿಷ್ಠರ ಬಳಿ ಬೇಡಿಕೆ ಸಲ್ಲಿಸಲಿದ್ದಾರೆ ಎಂದು ಗೊತ್ತಾಗಿದೆ. ಅಧ್ಯಕ್ಷ ಸ್ಥಾನ ಎಂಬ ಚೇಣುಗೂಡಿಗೆ ತಕ್ಕಣವೇ ಕೈ ಹಾಕದೇ ಕಾದು ನೋಡುವ ತಂತ್ರವನ್ನು ಹೈಕಮಾಂಡ್



ಮಾಡುತ್ತಿದೆ. ಅದಕ್ಕೆ ಕಾರಣ ಅಧ್ಯಕ್ಷ ಗಾದಿಯಲ್ಲಿ ಕುಳಿತಿರುವುದು ಯಾರೋ ಸಾಮಾನ್ಯ ವ್ಯಕ್ತಿಯಲ್ಲ ಬದಲಾಗಿ ಮಾಜಿ ಸಿಎಂ, ಬಿಜೆಪಿ ಶಕ್ತಿ ಬಿಎಸ್ ಯಡಿಯೂರಪ್ಪನವರ ಪುತ್ರ, ಇದು ಅವರಿಗೆ ಎಷ್ಟು ಪ್ಲಸ್ ಆಗಿದೆಯೋ, ಅಷ್ಟೇ ಮೈಮನಸನ್ನೂ ಕೂಡ ಆಗಿದೆ.

ಕನ್ನಡ ಸಾಂಸ್ಕೃತಿಕ ಕಾರ್ಯಕ್ರಮ ಟಿಕೆಟ್‌ಗಳು ಬಿಎಸ್ವೈ ಪುತ್ರ ಎಂಬ ಕಾರಣಕ್ಕೆ ಈಗ ಅವರ ವಿರೋಧಿ ಬಣ ವಿಜಯೇಂದ್ರ ಮುಂದುರಿಕೆಗೆ ವಿರೋಧ ವ್ಯಕ್ತಪಡಿಸುತ್ತಿದೆ. ಇನ್ನೊಂದು ಕಡೆ ವಿಜಯೇಂದ್ರ ಮುಂದುವರೆಯಬೇಕು ಎನ್ನುವ ಬಣ ಇದೆ. ಹೀಗಾಗಿ ಹೈಕಮಾಂಡ್ ಇಲ್ಲಿ ತಾಳೆಯ ಆಟ ಆಡುತ್ತಿದೆ. ಈಗ ಮಗನ ಕುರ್ಚಿ ಭದ್ರಪಡಿಸಲು ಸ್ವತಃ ಬಿಎಸ್ವೈ ಅಖಾಡಕ್ಕೆ ಧುಮುಕಿದ್ದಾರೆ. ಪಕ್ಷದ ಚುಕ್ಕಾಣಿ ಹಿಡಿಯುವ ರಾಜ್ಯಾಧ್ಯಕ್ಷ ಸ್ಥಾನಕ್ಕೆ ದೊಡ್ಡ ಮಟ್ಟದ ಲಾಬಿ, ಗುಂಪುಗಾರಿಕೆ ಮತ್ತು ತೆರೆಮರೆಯ ತಂತ್ರಗಾರಿಕೆಗಳು ಶುರುವಾಗಿವೆ. ಈ ಚದುರಂಗದಾಟದ ಕೇಂದ್ರಬಿಂದು ಬಿ.ಎಸ್. ಯಡಿಯೂರಪ್ಪ.

ಬಿಹಾರ ಚುನಾವಣೆ ಬಳಿಕ ಕರ್ನಾಟಕ ಬಿಜೆಪಿಯಲ್ಲಿ ಸಂಘಟನಾತಕ ಬದಲಾವಣೆ ಮಾಡಬಹುದೆಂಬ ನಿರೀಕ್ಷೆ ಇದೆ. ಈ ಬೆನ್ನಲ್ಲೇ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಪ್ರಮುಖರನ್ನು ಭೇಟಿ ಮಾಡಿ ಮಹತ್ವದ ಮಾತುಕತೆ ನಡೆಸಿದಿದ್ದಾರೆ. ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಮುಂದುವರಿಕೆಗೆ ಯಡಿಯೂರಪ್ಪ ಅವರ ಬೆಂಬಲಿಗರು ಮತ್ತು ಸ್ವತಃ ಯಡಿಯೂರಪ್ಪ ಅವರ ಆಶಯವಾಗಿದೆ. ಆದರೆ, ಬಿಜೆಪಿ ವರಿಷ್ಠರು ಈ ಬಗ್ಗೆ ಇನ್ನೂ ಯಾವುದೇ ನಿರ್ಧಾರ ಪ್ರಕಟಿಸಿಲ್ಲ. ಹೀಗಾಗಿ, ಬಿಎಸ್ ಯಡಿಯೂರಪ್ಪ ಅವರು ಪ್ರಧಾನಿಯನ್ನು ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ ಎನ್ನಲಾಗಿದೆ.

ಯಡಿಯೂರಪ್ಪಗೆ ಹೈಕಮಾಂಡ್ನಿಂದ ಸೂಚನೆ

ಇತ್ತೀಚೆಗೆ, ಬಿಹಾರ ಚುನಾವಣೆ ಸಂಬಂಧಿಸಿದ ಬಿಜೆಪಿ ಸಂಸದೀಯ ಮಂಡಳಿ ಮತ್ತು ಕೇಂದ್ರ ಚುನಾವಣಾ ಸಮಿತಿ ಸಭೆಗಳಿಗೆ ಹಾಜರಾಗುವಂತೆ ಯಡಿಯೂರಪ್ಪ ಅವರಿಗೆ ಹೈಕಮಾಂಡ್ನಿಂದ ಸೂಚನೆ ಬಂದಿತ್ತು. ಯಡಿಯೂರಪ್ಪ ಅವರ ಬೆಂಬಲಿಗರು ತಮ್ಮ ನಾಯಕನ ಪುತ್ರ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ತಮ್ಮ ಸ್ಥಾನದಲ್ಲಿ ಮುಂದುವರಿಯಬೇಕು ಎಂದು ಬಯಸುತ್ತಿದ್ದಾರೆ. ಯಡಿಯೂರಪ್ಪ ಅವರೂ ತಮ್ಮ ಪುತ್ರನ ರಾಜಕೀಯ ಭವಿಷ್ಯದ ದೃಷ್ಟಿಯಿಂದ ಪ್ರಯತ್ನಿಸುತ್ತಿದ್ದಾರೆ. ಆದರೆ, ಬಿಜೆಪಿ ವರಿಷ್ಠರು ಈ ವಿಚಾರದಲ್ಲಿ ತಮ್ಮ ನಿಲುವನ್ನು ಇನ್ನೂ ಸ್ಪಷ್ಟಪಡಿಸಿಲ್ಲ!

ಸರ್ಕಾರಿ PUC ವಿದ್ಯಾರ್ಥಿಗಳಿಗೆ ಮುಂದಿನ ವರ್ಷದಿಂದ ಉಚಿತ ಪಠ್ಯ ಹಾಗೂ ನೋಟ್ ಬುಕ್ ವಿತರಣೆ

ಪುಟ 1ರಿಂದ

ಕಂಪ್ಯೂಟರ್ ಕ್ಲಾಸ್ ಇರಲಿದೆ. ಅನುದಾನಿತ ಶಾಲೆಗಳಿಗೆ ನೋಟ್ ಬುಕ್ ಅಥವಾ ಯೂನಿಫಾರಂ ಎರಡರಲ್ಲಿ ಒಂದನ್ನು ನೀಡುವುದಿಲ್ಲ" ಎಂದರು.

"ನಾಡಿದ್ದು 12 ಸಾವಿರ ಅಭ್ಯರ್ಥಿಗಳು ಶಿಕ್ಷಕರ ನೇಮಕಾತಿಗೆ ಪರೀಕ್ಷೆ ಬರೆಯಲಿದ್ದಾರೆ. ಬಿಜೆಪಿರವರು ಮೂರುವರೆ ವರ್ಷಕ್ಕೆ 4,780 ಶಿಕ್ಷಕರನ್ನು ನೇಮಕಾತಿ ಮಾಡಿಕೊಂಡಿದ್ದರು. ನಾವು ಅಧಿಕಾರಕ್ಕೆ ಬಂದ ನಂತರ 13 ಸಾವಿರ ಶಿಕ್ಷಕರನ್ನು ಪಾಠ ಮಾಡಲು ತೆಗೆದುಕೊಂಡು ಹೋಗಿದ್ದೇವೆ. ಈಗ 800ಕ್ಕೂ ಅಧಿಕ ಉಪನ್ಯಾಸಕರನ್ನು ಪಿಯು ಕಾಲೇಜುಗಳಿಗೆ ಹಾಗೂ ಅನುದಾನಿತ ಶಾಲೆಗಳಿಗೆ 6 ಸಾವಿರ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ. ಖಾಸಗಿ ಶಾಲೆಯಾದರೆ ಹೀಗೆ ನೇಮಕ ಮಾಡಿಕೊಳ್ಳಲು ಆಗುತ್ತದೆಯೇ. ಈಗ ಮೂರು ಮರು ಪರೀಕ್ಷೆ ಆದ ಮೇಲೆ ಫಲಿತಾಂಶ ಚೆನ್ನಾಗಿ ಬರುತ್ತಿದೆ. 51 ಸಾವಿರ ಅತಿಥಿ ಶಿಕ್ಷಕರನ್ನು ನೇಮಿಸಲಾಗಿದೆ ಎಂದು ವಿರೋಧ ಪಕ್ಷದವರಿಗೆ ಟಾಂಗ್ ಕೊಟ್ಟರು. ಕೇಂದ್ರ ಸರ್ಕಾರ ಕಬ್ಬು ಬೆಳೆಗಾರರಿಗೆ ಹಾಗೂ ಮೆಕ್ಕೆಜೋಳ ರೈತರಿಗೆ ಅನುಕೂಲ ಮಾಡಿಕೊಡುತ್ತಿಲ್ಲ. ಇಲ್ಲಿ ರೈತರನ್ನು ಬಿಜೆಪಿ ದಾರಿ ತಪ್ಪಿಸುತ್ತಿದೆ. MSP ನಿಗದಿ ಮಾಡಬೇಕಾಗಿರುವುದು ಕೇಂದ್ರ ಸರ್ಕಾರ. ಕಬ್ಬು ಬೆಳೆಗಾರರ ಸಮಸ್ಯೆ ಆದಾಗ ಹೆಚ್.ಕೆ. ಪಾಟೀಲ್ ಹಾಗೂ ಶಿವಾನಂದ ಪಾಟೀಲ್ ಹೋಗಿದ್ದರು. ಆದರೆ, ವಿಜಯೇಂದ್ರ ಅಲ್ಲಿ ಹೋಗಿ ಮಲಗಿ ಏನು ಮಾಡಿದ್ರು" ಎಂದು ಸಚಿವರು ಪ್ರಶ್ನಿಸಿದರು.

ಕೊಳೆ ರೋಗ ಹಾಗೂ ಎಲೆ ಚುಕ್ಕೆ ರೋಗದ ಮಾಹಿತಿ ಪಡೆದುಕೊಂಡಿದ್ದೇನೆ. ನಮ್ಮ ರಾಜ್ಯದಲ್ಲಿ 180 ಕೋಟಿ ಬೆಳೆ ಪರಿಹಾರಕ್ಕೆ ಮನವಿ ಸಲ್ಲಿಸಲಾಗಿದೆ. ಇದರಲ್ಲಿ ನಮ್ಮ ಜಿಲ್ಲೆಯಿಂದ 69 ಕೋಟಿ ರೂ. ಪರಿಹಾರಕ್ಕೆ ಮನವಿ ಸಲ್ಲಿಸಲಾಗಿದೆ. ಇದನ್ನು ಅಭಿವೃದ್ಧಿ ಇಲಾಖೆಯ ಆಯುಕ್ತರ ಮೂಲಕ ಸಿಎಂಗೆ ಮಾಹಿತಿ ಕೊಡಬೇಕಾಗುತ್ತದೆ. ಕೊಳೆ ಹಾಗೂ ಎಲೆಚುಕ್ಕೆ ರೋಗದ ಔಷಧ ಕಂಡು ಹಿಡಿಯಲು ಪ್ರಯತ್ನ ಮಾಡಲಾಗುತ್ತಿದೆ ಎಂದರು.

ಈ ವೇಳೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಸಿಇಓ ಹೇಮಂತ ಕುಮಾರ್ ಸೇರಿದಂತೆ ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿದ್ದರು.

ಇಂದು ಹವಾಮಾನ: ಕರಾವಳಿಯಲ್ಲಿ ಮೋಡ ಕವಿದ ವಾತಾವರಣ, ಉಳಿದೆಡೆ ಒಣ ಹವೆ

ಬೆಂಗಳೂರು: ಇಂದಿನಿಂದ 4 ದಿನಗಳ ಕಾಲ ರಾಜ್ಯದಲ್ಲಿ ಒಣ ಹವೆ ಮುಂದುವರೆಯಲಿದ್ದು, ಕರಾವಳಿ ಜಿಲ್ಲೆಗಳು ಮತ್ತು ದಕ್ಷಿಣ ಒಳನಾಡು ಸೇರಿ ಹಲವಡೆ ಕಳೆದ ದಿನಗಳಿಂದ ಸುರಿಯುತ್ತಿದ್ದ ಸಾಧಾರಣ ಮಳೆಗೆ ಬ್ರೇಕ್ ಬೀಳಲಿದೆ. ಕೆಲ ಜಿಲ್ಲೆಗಳಲ್ಲಿ ಮಾತ್ರ ಇಂದು ಮೋಡಕವಿದ ವಾತಾವರಣ ಇರುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಉತ್ತರ ಒಳನಾಡು ಮತ್ತು ದಕ್ಷಿಣ ಒಳನಾಡು ಭಾಗದ ಜಿಲ್ಲೆಗಳಾದ ಬೆಳಗಾವಿ, ಬೀದರ್, ವಿಜಯಪುರ, ಬಾಗಲಕೋಟೆ, ಹಾವೇರಿ, ಗದಗ, ಧಾರವಾಡ, ಕಲಬುರಗಿ, ಕೊಪ್ಪಳ, ಬಳ್ಳಾರಿ, ರಾಯಚೂರು, ಯಾದಗಿರಿ ಮತ್ತು ವಿಜಯನಗರದಲ್ಲಿ ಒಣ ಹವೆ ಇರಲಿದೆ. ದಕ್ಷಿಣ ಒಳನಾಡು ಭಾಗದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಮಂಡ್ಯ, ಮೈಸೂರು, ಚಾಮರಾಜನಗರ, ಕೋಲಾರ, ಚಿಕ್ಕಬಳ್ಳಾಪುರ,

ಇ-ಪೇಪರ್: www.munjanevarthe.com

ಸಿಎಂ ಬದಲಾವಣೆ ಅಸಾಧ್ಯ: 'ಹೈ' ಸಂದೇಶ..!

ಬೆಂಗಳೂರು: ಕಾಂಗ್ರೆಸ್ ಪಕ್ಷದ ಭವಿಷ್ಯ ಹಾಗೂ ಮುಂದಿನ ಐದು ರಾಜ್ಯಗಳ ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ

ಬದಲಾವಣೆ ಅಸಾಧ್ಯ ಎಂಬ ಸಂದೇಶವನ್ನು ಕಾಂಗ್ರೆಸ್ ಹೈಕಮಾಂಡ್ ರವಾನಿಸಿದ್ದು, ಅದನ್ನು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಲುಪಿಸಿದ್ದಾರೆ.

ಅಧಿಕಾರ ಹಂಚಿಕೆ ಹಾಗೂ ಸಚಿವ ಸಂಪುಟ ಪುನರ್ ರಚನೆ ಸೇರಿದಂತೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿದಂತೆ ನಾನು ಮತ್ತು ಡಿ.ಕೆ.ಶಿವಕುಮಾರ್ ಕೇಳುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದರು. ಡಿ.ಕೆ.ಶಿವಕುಮಾರ್ ಕೂಡ ಅದನ್ನು ಅನುಮೋದಿಸಿದ್ದರು.

ಎರಡು ಉಪಹಾರ ಕೂಟದ ಬಳಿಕ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಯವರ ನಡುವಿನ ಹಗ್ಗ-ಜಗ್ಗಾಟ ತಗ್ಗಿದಂತಾಗಿದ್ದು, ಈಗ ತಿಳಿಯಾದ ವಾತಾವರಣ ನಿರ್ಮಾಣವಾಗಿದೆ. ಪಕ್ಷ ಸಂಘಟನೆ ಹಾಗೂ ಮುಂದಿನ ದಿನಗಳಲ್ಲಿ ನಡೆಯುವ ಸ್ಥಳೀಯ ಸಂಸ್ಥೆಗಳ ಚುನಾವಣೆಯತ್ತ ಎಲ್ಲಾ ನಾಯಕರು ದೃಷ್ಟಿ ನೆಟ್ಟಿದ್ದಾರೆ. ಈ ನಡುವೆ ಸಿದ್ದರಾಮಯ್ಯ ಅವರಲ್ಲ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಶನಿವಾರ 06 ಡಿಸೆಂಬರ್ 2025
SATURDAY 06 DECEMBER 2025

ಹಸ್ತಪ್ರತಿ ಉಳಿಸಲು ಕಠಿಣ ಕಾನೂನು ಅಗತ್ಯ: ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್

ಬೆಂಗಳೂರು: ರಾಜ್ಯದಲ್ಲಿ ಹಸ್ತಪ್ರತಿಗಳು ಆಪ್ತಿಯಾಗಿರುವುದರಿಂದ ಅವುಗಳನ್ನು ರಕ್ಷಿಸಲು ಹೊಸ ಯೋಜನೆ ರೂಪಿಸುವ ಮತ್ತು ಕಠಿಣ ಕಾನೂನುಗಳನ್ನು ತರುವ ಅಗತ್ಯವಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮತ್ತು ಪ್ರವಾಸೋದ್ಯಮ ಸಚಿವ ಎಚ್‌ಕೆ ಪಾಟೀಲ್ ಹೇಳಿದ್ದಾರೆ.

ಪುರಾತತ್ವ, ವಸ್ತುಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಆಯೋಜಿಸಿದ್ದ 'ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ' ಎಂಬ ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಭಾರತೀಯ ಪರಂಪರೆ, ಹಸ್ತಪ್ರತಿ ಸಂರಕ್ಷಣೆ ಮತ್ತು ಡಿಜಿಟಲೀಕರಣದ ಸಮಗ್ರ ವರದಿಯನ್ನು ಬಿಡುಗಡೆ ಮಾಡಲಾಯಿತು. ಪಾರಂಪರಿಕ ಸ್ಮಾರಕಗಳ ರಕ್ಷಣೆಗೆ ಕಾನೂನು ಇದ್ದರೂ ರಾಜ್ಯದಲ್ಲಿ ಗುರುತಿಸಲಾಗಿರುವ 25 ಸಾವಿರ ಸ್ಮಾರಕಗಳ ಪೈಕಿ 800 ಮಾತ್ರ ಸಂರಕ್ಷಿಸಲಾಗಿದೆ ಎಂದರು. ಎಲ್ಲಾ ಇಲಾಖೆಗಳು ಒಟ್ಟಾಗಿ ಕೆಲಸ ಮಾಡಬೇಕು. ಎಲ್ಲವನ್ನೂ ರಕ್ಷಿಸಲು ಕೆಲಸ ಮಾಡಬೇಕು. ಈ ಸರ್ಕಾರದ ಅವಧಿಯಲ್ಲಿ ಕನಿಷ್ಠ 5,000 ಸ್ಮಾರಕಗಳನ್ನು ರಕ್ಷಿಸುವ ಗುರಿಯನ್ನು ನಿಗದಿಪಡಿಸಲಾಗಿದೆ ಎಂದರು.

ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ ಕುರಿತ ಕಾರ್ಯಾಗಾರ

ಮೈಸೂರಿನ ಪ್ರಾಚ್ಯವಸ್ತು ಸಂಶೋಧನಾಲಯದ ಹಸ್ತಪ್ರತಿ, ತಾಳೆಗರಿ ಹಾಗೂ ಪುರಾತನ ಪುಸ್ತಕಗಳ ಡಿಜಿಟಲೀಕರಣ

ಇಲ್ಲಿಯವರೆಗೆ ಹಸ್ತಪ್ರತಿಗಳು ಮತ್ತು ವಿದ್ವತ್ ಕೃತಿಗಳ ತಡೆಗೆ ಸರ್ಕಾರ ಹೆಚ್ಚು ಗಮನ ಹರಿಸಿಲ್ಲ ಎಂದು ವಿಷಾದ ವ್ಯಕ್ತಪಡಿಸಿದ ಪಾಟೀಲ್, ಜನರು ತಮ್ಮಲ್ಲಿರುವ ಹಸ್ತಪ್ರತಿಗಳನ್ನು ಸರ್ಕಾರಕ್ಕೆ

ಹಸ್ತಾಂತರಿಸಲು ಅಥವಾ ಘೋಷಿಸಲು ಪ್ರೋತ್ಸಾಹಿಸಲು ಕಾನೂನು ತರಲಾಗುವುದು ಎಂದು ಹೇಳಿದರು. ಹಸ್ತಪ್ರತಿಗಳ ಡಿಜಿಟಲೀಕರಣ ಮತ್ತು ರಕ್ಷಣೆಗಾಗಿ ಕರ್ನಾಟಕದ ವಿವಿಧ ಸಂಸ್ಥೆಗಳು ಮಾಡಿರುವ ಕೆಲಸಗಳನ್ನು ವರದಿಯು ವಿವರಿಸಿದೆ. ಲಭ್ಯವಿರುವ ಮಾಹಿತಿಯ ಪ್ರಕಾರ, ಕರ್ನಾಟಕದಲ್ಲಿ ವಿವಿಧ ಸಂಘಗಳು, ಸಂಸ್ಥೆಗಳು, ಮಠಗಳು, ಖಾಸಗಿ ವ್ಯಕ್ತಿಗಳು, ವಿಶ್ವವಿದ್ಯಾಲಯಗಳು ಮತ್ತು ಸರ್ಕಾರಿ ಇಲಾಖೆಗಳು ಸಂಗ್ರಹಿಸಿದ 1,20,835 ಹಸ್ತಪ್ರತಿಗಳಿವೆ.

ಈ ವರದಿಯು ಸರ್ಕಾರವು ಹಸ್ತಪ್ರತಿ ಸಂರಕ್ಷಣೆ ಮತ್ತು ಡಿಜಿಟಲ್ ಪರಂಪರೆ ನಿರ್ವಹಣೆಯಲ್ಲಿ ತೆಗೆದುಕೊಳ್ಳುತ್ತಿರುವ ಪ್ರಯತ್ನಗಳನ್ನು ತೋರಿಸುವ ಕೇಂದ್ರ ಸರ್ಕಾರಕ್ಕೆ ಈ ಹಿಂದೆ ಸಲ್ಲಿಸಿದ ಸಮಗ್ರ ನೀತಿಯ ಅವಲೋಕನದೊಂದಿಗೆ ವಿವರವಾದ ಸಾಂಖ್ಯಿಕ ಟಿಪ್ಪಣಿಗಳನ್ನು ಒಳಗೊಂಡಿದೆ.

ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ ಕುರಿತ ಕಾರ್ಯಾಗಾರ

ಕೊಪ್ಪಳದಲ್ಲಿ ಅಪರೂಪದ ಉರಿ ಉಯ್ಯಾಲೆ ಬಲಿದಾನದ ಸ್ಮಾರಕಗಳು ಪತ್ತೆ!

ಒಂದೇ ಡಿಜಿಟಲ್ ಪ್ಲಾಟ್‌ಫಾರ್ಮ್ ಅಡಿಯಲ್ಲಿ ಹಸ್ತಪ್ರತಿಗಳು, ಮುದ್ರಿತ ಪುಸ್ತಕಗಳು ಮತ್ತು ಆರ್ಕೈವಲ್ ದಾಖಲೆಗಳನ್ನು ಸಂಯೋಜಿಸುವ ಏಕೀಕೃತ ಕರ್ನಾಟಕ ಡಿಜಿಟಲ್ ಹೆರಿಟೇಜ್ ಪೋರ್ಟಲ್ ನ್ನು ಸಹ ವರದಿಯು ಪಟ್ಟಿ ಮಾಡಿದೆ. ಡಿಜಿಟಲ್ ಇಂಡಿಯಾ ಮಿಷನ್ ಮತ್ತು ಹಸ್ತಪ್ರತಿಗಳ ರಾಷ್ಟ್ರೀಯ ಮಿಷನ್ ನ ಭಾಗವಾಗಿದೆ. ಓರಿಯಂಟಲ್ ರಿಸರ್ಚ್ ಇನ್‌ಸ್ಟಿಟ್ಯೂಟ್ (ORI) ಮೈಸೂರಿನಲ್ಲಿ ಭಾರತೀಯ ವಿಜ್ಞಾನಗಳ ಇತಿಹಾಸಕ್ಕಾಗಿ ರಾಷ್ಟ್ರೀಯ ಕೇಂದ್ರವನ್ನು ಸ್ಥಾಪಿಸುವ ಯೋಜನೆಯನ್ನು ವರದಿಯು ಪಟ್ಟಿಮಾಡಿದೆ. ಡಿಜಿಟಲ್ ಆರ್ಕೈವಿಸ್ಟ್‌ಗಳಿಗೆ ತರಬೇತಿ, ಸ್ವಿಫ್ಟ್ ಗುರುತಿಸುವಿಕೆ ಮತ್ತು ಮೆಟಾಡೇಟಾ ಟ್ಯಾಗಿಂಗ್‌ಗಾಗಿ ಎಐ-ಚಾಲಿತ ಸಾಧನಗಳನ್ನು ಅಳವಡಿಸುವುದು ಮತ್ತು ಡಿಜಿಟೈಸೇಶನ್ ಸಾಮರ್ಥ್ಯವನ್ನು ವಿಸ್ತರಿಸುವುದು. ಒಳಗೆಐ ತನ್ನ ಸಂಪೂರ್ಣ ಹಸ್ತಪ್ರತಿ ಸಂಗ್ರಹವನ್ನು ಡಿಜಿಟಲೀಕರಣಗೊಳಿಸುವ ಕಾರ್ಯಕ್ರಮವನ್ನು ಪ್ರಾರಂಭಿಸಿದೆ ಮತ್ತು ತನ್ನದೇ ಆದ ಮೇರ್ಸೈಟ್ ನ್ನು ತೆರೆಯುತ್ತದೆ. ಇದರಿಂದಾಗಿ ತಾಳೆ ಎಲೆ ಮತ್ತು ಕಾಗದದ ಹಸ್ತಪ್ರತಿಗಳ ಬೃಹತ್ ಸಂಗ್ರಹವು ಪ್ರಪಂಚದಾದ್ಯಂತದ ಆಸಕ್ತ ವಿದ್ವಾಂಸರಿಗೆ ಲಭ್ಯವಾಗುವಂತೆ ಮಾಡುತ್ತದೆ.

ಇ-ಪೇಪರ್: www.munjanevarthe.com

ಸಿಎಂ ಆಗುವ ಆಸೆ ಎಲ್ಲರಿಗೂ ಇರುತ್ತದೆ, ನನಗೂ ಆಸೆ ಇದೆ: ಸಚಿವ ದಿನೇಶ್ ಗುಂಡೂರಾವ್

ಮೈಸೂರು: ಸಿಎಂ ಆಗುವ ಆಸೆ ಎಲ್ಲರಿಗೂ ಇರುತ್ತದೆ, ನನಗೂ ಆಸೆ ಇದೆ. ಆದರೆ, ಸಮಯ ಸಂದರ್ಭ ಎಲ್ಲವನ್ನೂ ಕೂಡ ತೀರ್ಮಾನ ಮಾಡುತ್ತದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಮೈಸೂರಿನಲ್ಲಿ ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸಿ, ಮಾಧ್ಯಮಗಳ ಜೊತೆ ಮಾತನಾಡುವ ವೇಳೆ, ನೀವು ಸಹ ಸಿಎಂ ರೇಸ್?ನಲ್ಲಿ ಇದ್ದೀರಾ? ಎಂಬ ಮಾಧ್ಯಮದ ಪ್ರಶ್ನೆಗೆ ಸಚಿವ ದಿನೇಶ್ ಗುಂಡೂರಾವ್ ಅವರು, "ನನ್ನನ್ನು ಯಾಕೆ ಎಳೆದುಕೊಂಡು ಬರ್ತಾ ಇದ್ದೀರಿ. ಸಿಎಂ ಆಗುವ ಆಸೆ ಎಲ್ಲರಿಗೂ ಇರುತ್ತದೆ. ನನಗೂ ಆಸೆ ಇದೆ. ಆದರೆ, ಸಮಯ ಸಂದರ್ಭ ಎಲ್ಲವನ್ನೂ ಕೂಡ ತೀರ್ಮಾನ ಮಾಡುತ್ತದೆ. ಈಗ ಯಾಕೆ ಎಂದು ಉತ್ತರಿಸಿರುವರು.

ಬಳಿಕ ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರಕ್ಕೆ, "ನಮ್ಮಲ್ಲಿ ಯಾವುದೇ ಗೊಂದಲವಿಲ್ಲ. ಸಿಎಂ ಹಾಗೂ ಡಿಸಿಎಂ ಇದ್ದರು ಹೈಕಮಾಂಡ್ ನಿರ್ಧಾರಕ್ಕೆ ಬದ್ಧ ಎಂದಿದ್ದಾರೆ. ಹೈಕಮಾಂಡ್ ತೀರ್ಮಾನವೇ ಅಂತಿಮ. ನಮ್ಮಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲ. ಎಲ್ಲರಿಗೂ ಸಿಎಂ ಆಗಬೇಕು ಎಂಬ ಆಸೆ ಇರುತ್ತದೆ. ಆದರೆ ಯಾರು ಆಗಬೇಕು ಎಂಬುದನ್ನು ಹೈಕಮಾಂಡ್ ನಿರ್ಧಾರ ಮಾಡುತ್ತದೆ ಎಂದರು.

ವಿರೋಧ ಪಕ್ಷ ಸಂಯಾಗಿ ಕೆಲಸ ಮಾಡುತ್ತಿಲ್ಲ: ವಿಪಕ್ಷ ಬಿಜೆಪಿ ಸಂಪೂರ್ಣ ಕೆಲಸ ಮಾಡುತ್ತಿಲ್ಲ. ಕೇವಲ ಭಾಷಣ ಮಾಡಲು ವಿಜಯೇಂದ್ರ, ಅಶೋಕ್, ಪ್ರಹ್ಲಾದ್ ಜೋಶಿ ಬ್ಯುಸಿ ಇದ್ದಾರೆ. ರಾಜ್ಯದ ರೈತರ ಸಮಸ್ಯೆಗಳನ್ನು ಕೇಂದ್ರ ಸರ್ಕಾರದ ಗಮನಕ್ಕೆ ತರುವಲ್ಲಿ ಬಿಜೆಪಿ ಸಂಸದರು ವಿಫಲರಾಗಿದ್ದಾರೆ. ಇವರಿಗೆ ಜವಾಬ್ದಾರಿ ಇಲ್ಲವೇ ಎಂದು ಸಚಿವರು ಪ್ರಶ್ನಿಸಿದರು.

ಮುಂದುವರೆದು, ಬಿಜೆಪಿ ರೀತಿ ನಮ್ಮಲ್ಲಿ ಯಾವುದೇ ಗೊಂದಲಗಳು ಕಿತ್ತಾಟಗಳು ಇಲ್ಲ. ಸದಾನಂದ ಗೌಡ ಹಾಗೂ ಜಗದೀಶ್ ಶೆಟ್ಟರ್ ಸಿಎಂ ಆದಾಗ ಬಿಜೆಪಿಯಲ್ಲಿ ಆದ ಕಿತ್ತಾಟ ನಮ್ಮಲ್ಲಿ ಇಲ್ಲ. ಎಲ್ಲರೂ ಒಟ್ಟಾಗಿ ಕೂತು ಎಲ್ಲವನ್ನು ಬಗೆಹರಿಸಿಕೊಳ್ಳುತ್ತೇವೆ. ನಮ್ಮಲ್ಲಿ ಯಾವುದೇ ಗೊಂದಲವಿಲ್ಲ ಎಂದು ತಮ್ಮ ಪಕ್ಷವನ್ನು ಸಮರ್ಥಿಸಿಕೊಂಡರು.

ಸ್ಪಷ್ಟ ಮೈಸೂರು ಅಭಿಯಾನ-ಆರೋಗ್ಯ ಇಲಾಖೆಯಿಂದ ಸಹಿ: ಸಾಂಕ್ರಮಿಕವಲ್ಲದ ರೋಗ (ಎನ್‌ಸಿಡಿ)ಗಳನ್ನು ತಡೆಗಟ್ಟುವ ಹಾಗೂ ಮೈಸೂರು ನಿವಾಸಿಗಳ ಆರೋಗ್ಯಕರ ಜೀವನ ಉತ್ತೇಜಿಸಲು ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಫೌಂಡೇಶನ್ ಮತ್ತು ಆರೋಗ್ಯ ವರ್ಲ್ಡ್ ಇಂಡಿಯಾ ಟ್ರಸ್ಟ್ ಸಹಭಾಗಿತ್ವದಲ್ಲಿ ಪ್ರಾರಂಭಿಸಿರುವ ಸ್ಪಷ್ಟ ಮೈಸೂರು ಅಭಿಯಾನಕ್ಕೆ ಮಾನ್ಯ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರ ಸಮ್ಮುಖದಲ್ಲಿ ಒಪ್ಪಂದಕ್ಕೆ ಸಹಿ ಹಾಕಲಾಯಿತು.

ಒಡೆಯರ್ ಸೆಂಟರ್ ಫಾರ್ ಆರ್ಕಿಟೆಕ್ಚರ್‌ನಲ್ಲಿ ಆಯೋಜಿಸಿದ್ದ ಸ್ಪಷ್ಟ ಮೈಸೂರು ಅಭಿಯಾನ ಉದ್ಘಾಟಿಸಿ ಮಾತನಾಡಿದ ದಿನೇಶ್ ಗುಂಡೂರಾವ್, ಆರೋಗ್ಯ ವರ್ಲ್ಡ್ ಮೊದಲ ಬಾರಿಗೆ ಬೆಂಗಳೂರು ನಗರದಲ್ಲಿ ಸಾಂಕ್ರಮಿಕವಲ್ಲದ ರೋಗಗಳ ಬಗ್ಗೆ ಜಾಗೃತಿ ಮೂಡಿಸುವ ಅಭಿಯಾನ ಕೈಗೊಂಡು, ಅದರ ಯಶಸ್ಸಿನ ಬಳಿಕ ಎರಡನೇ ಅಭಿಯಾನವನ್ನು ಮೈಸೂರಿನಲ್ಲಿ ಸ್ಪಷ್ಟ ಮೈಸೂರು ಶೀರ್ಷಿಕೆಯಡಿ ಮುಂದುವರೆಸುತ್ತಿರುವುದು ಶ್ಲಾಘನೀಯ. ಈ ಅಭಿಯಾನವನ್ನು ಇನ್ನಷ್ಟು ಯಶಸ್ವಿಗೊಳಿಸಲು ನಮ್ಮ ಇಲಾಖೆಯ ಸಹಕಾರವನ್ನೂ ಸಹ ನೀಡಲು ಮುಂದಾಗಿದ್ದು, ಒಪ್ಪಂದ ಮಾಡಿಕೊಂಡಿದ್ದೇವೆ, ಮುಂದಿನ ಎರಡು ವರ್ಷದಲ್ಲಿ ಮೈಸೂರಿನ ಜನರ ಆರೋಗ್ಯಕರ ಜೀವನ ಉತ್ತೇಜಿಸುವ ಕೆಲಸ ಈ ಮೂಲಕ ಆಗಲಿದೆ" ಎಂದು ಭರವಸೆ ನೀಡಿದರು.

ದೇವಾಲಯದ ಹಣ ದೇವರಿಗೆ ಸೇರಿದ್ದು, ಸಹಕಾರಿ ಬ್ಯಾಂಕುಗಳನ್ನು ಶ್ರೀಮಂತಗೊಳಿಸಲು ಬಳಸಲಾಗುವುದಿಲ್ಲ

ನವದೆಹಲಿ : ದೇವಾಲಯದ ಹಣವು ದೇವರಿಗೆ ಸೇರಿದ್ದು, ಅದನ್ನು ಸಹಕಾರಿ ಬ್ಯಾಂಕುಗಳನ್ನು ಶ್ರೀಮಂತಗೊಳಿಸಲು ಬಳಸಲಾಗುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಶುಕ್ರವಾರ ಮೌಖಿಕವಾಗಿ ಹೇಳಿದೆ. ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠವು ಈ ವಿಷಯವಾಗಿ ಸಲ್ಲಿಕೆಯಾಗಿದ್ದ ಅರ್ಜಿ ವಿಚಾರಣೆ ನಡೆಸಿತು.

'ದೇವಾಲಯದ ಹಣವು ದೇವರಿಗೆ ಸೇರಿದ್ದು, ಈ ಹಣವನ್ನು ಉಳಿಸಬೇಕು, ರಕ್ಷಿಸಬೇಕು ಮತ್ತು ದೇವಾಲಯದ ಹಿತಾಸಕ್ತಿಗಳಿಗಾಗಿ ಮಾತ್ರ ಬಳಸಬೇಕು. ಇದು ಸಹಕಾರಿ ಬ್ಯಾಂಕ್‌ಗೆ ಆದಾಯದ ಮೂಲ ಅಥವಾ ಉಳಿವಿನ ಮೂಲವಾಗಲು ಸಾಧ್ಯವಿಲ್ಲ' ಎಂದು ಸಿಜೆಐ ಹೇಳಿದ್ದಾರೆ. ಠೇವಣಿಗಳು ಪಕ್ವವಾದಾಗ ಬ್ಯಾಂಕುಗಳು ತಕ್ಷಣವೇ ಮೊತ್ತವನ್ನು ಬಿಡುಗಡೆ ಮಾಡಬೇಕೆಂದು ನ್ಯಾಯಮೂರ್ತಿ ಬಾಗ್ಚಿ ಹೇಳಿದರು.

ಕೇರಳ ಹೈಕೋರ್ಟ್ ನೀಡಿದ ನಿರ್ದೇಶನದಲ್ಲಿ ಏನು ತಪ್ಪಾಗಿದೆ ಎಂದು ಅರ್ಜಿದಾರರ ಪರ ವಕೀಲರನ್ನು ಪ್ರಶ್ನಿಸಿದ ಪೀಠವು, "ನೀವು ಬ್ಯಾಂಕನ್ನು ಉಳಿಸಲು ದೇವಾಲಯದ ಹಣವನ್ನು ಬಳಸಲು ಬಯಸುತ್ತೀರಾ?" ಎಂದು ಪ್ರಶ್ನಿಸಿದೆ. ದೇವಸ್ಥಾನದ ಹಣವು ಸಹಕಾರಿ ಬ್ಯಾಂಕಿನಲ್ಲಿದ್ದು, ಅದು ತುಂಬಾ ಕಷ್ಟದಿಂದ ಉಸಿರಾಡುತ್ತಿದೆ. ಅದು ಗರಿಷ್ಠ ಬಡ್ಡಿ ನೀಡುವಲ್ಲ ಆರೋಗ್ಯಕರ ರಾಷ್ಟ್ರೀಕೃತ ಬ್ಯಾಂಕ್‌ಗೆ ಹೋಗಬೇಕು ಎಂದು ಪೀಠವು ಅಭಿಪ್ರಾಯಪಟ್ಟಿದೆ.

ಈ ವೇಳೆ, ಸಹಕಾರಿ ಬ್ಯಾಂಕುಗಳ ಪರ ವಕೀಲರು, ಠೇವಣಿಯನ್ನು ಮುಚ್ಚುವುದನ್ನು ಬ್ಯಾಂಕುಗಳು ವಿರೋಧಿಸುವುದಿಲ್ಲ. ಆದರೆ, ಎರಡು ತಿಂಗಳೊಳಗೆ ಠೇವಣಿಗಳನ್ನು ಹಿಂದಿರುಗಿಸುವಂತೆ ಹೈಕೋರ್ಟ್ ಹೊರಡಿಸಿದ ನಿರ್ದೇಶನವು ತೊಂದರೆಗಳನ್ನುಂಟುಮಾಡುತ್ತಿದೆ'

ಎಂದು ವಾದಿಸಿದರು.

ಆಗ ಪೀಠವು, 'ಬ್ಯಾಂಕುಗಳು ಗ್ರಾಹಕರನ್ನು ಮತ್ತು ಠೇವಣಿಗಳನ್ನು ಆಕರ್ಷಿಸಲು ಸಾಧ್ಯವಾಗದಿದ್ದರೆ, ಅದು ಅವರ ಸಮಸ್ಯೆ. ಜನರಲ್ಲಿ ನಿಮ್ಮ ವಿಶ್ವಾಸಾರ್ಹತೆಯನ್ನು ಸ್ಥಾಪಿಸಿ ಎಂದು ಹೇಳಿತು. ಈ ವೇಳೆ ವಕೀಲರು ತಮ್ಮ ಎಫ್‌ಡಿಗಳನ್ನು ನಿರಂತರವಾಗಿ ನವೀಕರಿಸಲಾಗುತ್ತಿದೆ ಎಂದು ವಾದಿಸಿದರು. ವಾದ ಆಲಿಸಿದ ನಂತರ ಪೀಠವು ಅರ್ಜಿಯನ್ನು ಪುರಸ್ಕರಿಸಲು ನಿರಾಕರಿಸಿತು ಮತ್ತು ಅರ್ಜಿದಾರರಿಗೆ ಸಮಯ ವಿಸ್ತರಣೆಗಾಗಿ ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸುವಂತೆ ಆದೇಶಿಸಿತು.

ತಿರುನೆಲ್ಲಿ ದೇವಸ್ಥಾನ ದೇವಸ್ವಂಗೆ ಠೇವಣಿಗಳನ್ನು ಹಿಂದಿರುಗಿಸುವಂತೆ ಕೇರಳ ಹೈಕೋರ್ಟ್ ಹೊರಡಿಸಿದ ನಿರ್ದೇಶನವನ್ನು ಪ್ರಶ್ನಿಸಿ, ಕೇರಳದ ಕೆಲವು ಸಹಕಾರಿ ಬ್ಯಾಂಕುಗಳು ಸಲ್ಲಿಸಿದ್ದ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ಇಂದು ವಿಚಾರಣೆ ನಡೆಸಿತು.

ಮನಾಥನವಾಡಿ ಕೋ-ಆಪರೇಟಿವ್ ಅರ್ಬನ್ ಸೊಸೈಟಿ ಲಿಮಿಟೆಡ್ ಮತ್ತು ತಿರುನೆಲ್ಲಿ ಸರ್ವಿಸ್ ಕೋಆಪರೇಟಿವ್ ಬ್ಯಾಂಕ್ ಲಿಮಿಟೆಡ್ ಆಗಸ್ಟ್‌ನಲ್ಲಿ ಕೇರಳ ಹೈಕೋರ್ಟ್‌ನ ವಿಭಾಗೀಯ ಪೀಠ ನೀಡಿದ ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದವು.

ಇನ್ಸ್ಪೆಕ್ಟರ್ ರೇವಣ್ಣ ಬಡವರ ಪಾಲಿಗೆ ರಾವಣ

ಬೇಲೂರು: ಪಟ್ಟಣದ ಸರ್ಕಾರಿ ಆಸ್ಪತ್ರೆಯ ಪಕ್ಕದಲ್ಲಿ ಖಾಸಗಿ ಆಂಬುಲೆನ್ಸ್ ನಿಲ್ಲಿಸದಂತೆ ಖಾಸಗಿ ಹೋಟೆಲ್ ಅನಘ ಗ್ರ್ಯಾಂಡ್ ಮಾಲೀಕ ಆಂಬುಲೆನ್ಸ್ ಚಾಲಕರಿಗೆ ಕಿರುಕುಳ ನೀಡುತ್ತಿದ್ದಾರೆ ಎಂದು ಆಂಬುಲೆನ್ಸ್ ಚಾಲಕರು ಮಾಲೀಕನ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಚಾಲಕ ಸುಭಿಯಾನ್ ಮಾತನಾಡಿ ಕಳೆದ ಕೆಲ ತಿಂಗಳ ಹಿಂದೆ ಮಾಜಿ ಪುರಸಭೆ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಎ.ಆರ್.ಅಶೋಕ್ ಖಾಸಗಿ ಆಂಬುಲೆನ್ಸ್ ಗಳ ಸೇವೆಗಾಗಿ ಸಾರ್ವಜನಿಕ ಆಸ್ಪತ್ರೆ ಪಕ್ಕದಲ್ಲಿ ನಿಗದಿತ ಸ್ಥಳ ಗುರ್ತಿಸಿ,ಎಮರ್ಜೆನ್ಸಿಯಾಗಿ ಆಸ್ಪತ್ರೆಗೆ ಬರುವ ರೋಗಿಗಳನ್ನು ಇತರೆ ಜಿಲ್ಲಾಸ್ಪತ್ರೆಗಳಿಗೆ ಸಾಗಿಸುವ ಸಲುವಾಗಿ ಅನುಕೂಲ ಮಾಡಿಕೊಟ್ಟಿದ್ದರು ಆದರೆ ಕೆಲ ದಿನಗಳ ಹಿಂದೆ ಯಾರೋ ವಿಕೃತ ಮನಸ್ಸಿನ ಕಿಡಿಗೇಡಿಗಳು 4 ಆಂಬುಲೆನ್ಸ್ ಗಳ ಟೈರ್ ಗಳಿಗೆ ಮೊಳೆಗಳನ್ನು ಚುಚ್ಚಿ ಪಂಚರ್ ಮಾಡಿ ಹೊರ ರೋಗಿಗಳ ಸೇವೆಗೆ ಅಡ್ಡಿಪಡಿಸಿದ್ದರು.ಕೂಡಲೆ ಪೋಲೀಸ್ ಠಾಣೆಗೆ ದೂರು ನೀಡಿದರೂ ಸರ್ಕಲ್ ಇನ್ಸ್ಪೆಕ್ಟರ್ ರೇವಣ್ಣ ಆಗಲಿ,ಸಬ್ ಇನ್ಸ್ಪೆಕ್ಟರ್ ಹಾಗೂ ದೇವರಾಜು ಸೇರಿದಂತೆ ಯಾರು ಬಂದು ವಿಚಾರಣೆ ಮಾಡಲಿಲ್ಲ.ಕೆಲವೊಮ್ಮೆ ಅಪಘಾತಗಳು ಸಂಭವಿಸಿದಾಗ,ಸರ್ಕಾರಿ ಆಸ್ಪತ್ರೆ ಆಂಬುಲೆನ್ಸ್ ಗಳು ಇಲ್ಲದಿರುವಾಗ ನಾವು ಸಾರ್ವಜನಿಕರಿಗೆ ತೊಂದರೆಯಾಗದಂತೆ ಎಮರ್ಜೆನ್ಸಿ ಸೇವೆ ಮಾಡುತ್ತಿದ್ದೇವೆಆದರೆ ಇತ್ತೀಚೆಗೆ ಅನಘ ಹೋಟೆಲ್ ಮಾಲೀಕರು ತನ್ನ ಹೋಟೆಲ್ ಗೆ ಬರುವ ಶ್ರೀಮಂತರಿಗರ ವಾಹನಗಳನ್ನು ನಿಲ್ಲಿಸುವ ಸಲುವಾಗಿ,ಆಂಬುಲೆನ್ಸ್ ಸೇವೆಗೆ ಸ್ಥಳ ನಿಗದಿ ಮಾಡಿ ಬೋರ್ಡ್ ಹಾಕಿರುವುದನ್ನು ಕಿತ್ತುಹಾಕಿ ನಮ್ಮ ಆಂಬುಲೆನ್ಸ್ ಗಳನ್ನು ನಿಲ್ಲಿಸದಂತೆ ತಡೆದು ತನ್ನ ವಾಹನವನ್ನು ಅಡ್ಡಾಡ್ಡಿಯಾಗಿ ನಿಲ್ಲಿಸಿ ನಮಗೆ ಕಿರುಕುಳ ನೀಡುತ್ತಿದಾವೆ ಮಾಲೀಕರ ವಿರುದ್ಧ ವಿಚಾರಣೆ ಮಾಡದೆ ಪೋಲೀಸರು ಹೋಟೆಲ್ ಮಾಲೀಕ ನ ಪರವಾಗಿ ಬಂದು ಸರ್ಕಲ್ ಇನ್ಸ್ಪೆಕ್ಟರ್ ರೇವಣ್ಣ ನಮಗೆ ಧಮ್ಕಿ ಹಾಕಿ ಹೋಟೆಲ್ ಮಾಲೀಕರಿಗೆ ತೊಂದರೆ ನೀಡದಂತೆ ಬೆದರಿಕೆ ಹಾಕಿದ್ದಾರೆ.ನಮಗೆ ತೊಂದರೆಯಾದಾಗ ಬರದ ಪೋಲೀಸರು,



ಹೋಟೆಲ್ ಮಾಲೀಕನ ಪರ ಬ್ಯಾಟಿಂಗ್ ಮಾಡುವುದು ಯಾವ ನ್ಯಾಯ.ನಾವು ಬಡವರು ಒಂದು ದಿನದ ಕೂಲಿಗಾಗಿ ಸಾರ್ವಜನಿಕರ ಸೇವೆ ಮಾಡುತ್ತಿದ್ದೇವೆ.ನಮಗೆ ನ್ಯಾಯ ಕೊಡಿಸುವಂತೆ ಅಶೋಕಣ್ಣರ ಬಳಿ ಬಂದಿದ್ದೇವೆ. ಎಂದು ಮಾಧ್ಯಮದ ಮುಂದೆ ಅಳಲು ತೋಡಿಕೊಂಡರು.

ಇದೇ ಸಂದರ್ಭದಲ್ಲಿ ಸ್ಥಳಕ್ಕೆ ಬೇಟಿ ನೀಡಿದ ಮಾಜಿ ಪುರಸಭೆ ಅಧ್ಯಕ್ಷ ಎ.ಆರ್.ಅಶೋಕ್ ಮಾತನಾಡಿ,ಕಳೆದ ಒಂದು ವರ್ಷದ ಹಿಂದೆ 4 ಆಂಬುಲೆನ್ಸ್ ಗಳನ್ನು ಸರ್ಕಾರಿ ಆಸ್ಪತ್ರೆ ಮುಂಭಾಗದಲ್ಲಿ ನಿಲ್ಲಿಸತ್ತಿದ್ದರು.

ಎಮರ್ಜೆನ್ಸಿ ರೋಗಿಗಳನ್ನು ಆಸ್ಪತ್ರೆಗೆ ಕರೆದೊಯ್ಯಲು ಆಟೋಗಳಿಗೆ ಜಾಗವಿರಲಿಲ್ಲ.ಆದರೆ ಹೊರ ರೋಗಿಗಳಿಗೆ ಯಾವ ತೊಂದರೆಯಾಗದಂತೆ ನಾನು ಅಧ್ಯಕ್ಷನಾಗಿದ್ದಾಗ ಆಸ್ಪತ್ರೆ ಪಕ್ಕದಲ್ಲಿ ಒಂದು ಸೂಕ್ತವಾದ ಜಾಗ ಗುರ್ತಿಸಿ ಒಂದು ಫೋರ್ಡ್ ಹಾಕಿಸಿದ್ದೆ.ಪಕಕಾಲದಲ್ಲಿ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಶನಿವಾರ 06 ಡಿಸೆಂಬರ್ 2025
SATURDAY 06 DECEMBER 2025

ಸಪ್ತಮಾತೃಕ ಅದಿಶಕ್ತಿ ದೇವಸ್ಥಾನ ಜೀರ್ಣೋದ್ಧಾರ ಜಿಬಿಎ ಪಾಲಿಕೆಗಳ ಅಧಿಕಾರಿ, ನೌಕರರ ಕ್ಷೇಮಾಭಿವೃದ್ಧಿ ಸಂಘ ಸಹಕಾರ

ಬೆಂಗಳೂರು: ಜಿಬಿಎ ಕೇಂದ್ರ ಕಛೇರಿ ಅವರಣದಲ್ಲಿರುವ ಬಹಳ ಶಕ್ತಿಶಾಲಿಯಾದ ಸಪ್ತಮಾತೃಕ ಅದಿಶಕ್ತಿ ದೇವಸ್ಥಾನ ಜೀರ್ಣೋದ್ಧಾರ ಕಾರ್ಯಕ್ರಮ ಸಂಪೂರ್ಣಗೊಂಡಿದ್ದು, ಜನವರಿ 2026ಕ್ಕೆ ಲೋಕರ್ಪಣೆಯಾಗಲಿದೆ. ದೇವಸ್ಥಾನದಲ್ಲಿ ಸಪ್ತಮಾತೃಕೆಯರು, ಗಣೇಶ, ನವಗ್ರಹಗಳು ಸುಸಜ್ಜಿತ ದೈವಸಾನಿಧ್ಯ ರೂಪಗೊಂಡಿದೆ.

ಇದೇ ಸಂದರ್ಭದಲ್ಲಿ ದೇವಸ್ಥಾನ ಜೀರ್ಣೋದ್ಧಾರದಲ್ಲಿ ಸಹಕಾರ ನೀಡಿದ ಎ.ಅಮೃತ್ ರಾಜ್ ರವರು ಮಾಧ್ಯಮಗಳಿಗೆ ಮಾಹಿತಿ ನೀಡಿದರು. ಅಧಿಶಕ್ತಿ ದೇವಸ್ಥಾನ 400ವರ್ಷ ಹಳೆಯದಾದ ದೇವ ಸ್ಥಾನವಾಗಿದೆ ತುಂಬ ಹಳೆಯ ಕಟ್ಟಡ ಮತ್ತು ವಿಶಿಷ್ಟ ದೀಪಗಳು ಬೆಳಗುವು ದರಿಂದ ದೇವಸ್ಥಾನ ಶಿಥಿಲಾವಸ್ಥೆ ತಲುಪಿತು. ಬರುವ ಭಕ್ತರಿಗೆ ಸೂಕ್ತ ವ್ಯವಸ್ಥೆ ಇರಲಿಲ. ದೇವಸ್ಥಾನ ಆಡಳಿತ ಮಂಡಳಿ, ಅರ್ಚಕರು ಜಿಬಿಎ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ದೇವಸ್ಥಾನದ ನವೀಕರಣ ಮಾಡಲು ಸಹಕಾರಿಸಬೇಕು ಎಂದು ಮನವಿ ಸಲ್ಲಿಸಿದರು. ಅವರ ಮನವಿಗೆ ಸ್ಪಂದಿಸಿ ಅಧಿಕಾರಿ, ನೌಕರರ ವ್ಯಯಕ್ತಿಕ ದೇಣಿಗೆ ಮತ್ತು ನೌಕರರ ವೇತನದಲ್ಲಿ ಕಡಾವಣೆ ಮಾಡುವ ಮೂಲಕ ಸಂಗ್ರಹಿಸಿ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಬಳಸಲಾಯಿತು. ಇದೀಗ ದೇವಸ್ಥಾನ ಸಂಪೂರ್ಣ ನವೀಕರಣ ಸುಸಜ್ಜಿತ ದೈವಸ್ಥಳವಾಗಿದೆ. ಜನವರಿಯಲ್ಲಿ ದೇವಸ್ಥಾನ ಲೋಕರ್ಪಣೆಯನ್ನು ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್, ಮುಖ್ಯ ಆಯುಕ್ತರು ನೇರವೆರಿಸುವರು

16 ಅಂಗವಿಕಲರಿಗೆ ತ್ರಿಚಕ್ರ ವಾಹನ ವಿತರಣೆ

ಆಲೂರು : ಸರಕಾರದಿಂದ ದೊರೆಯಬೇಕಾದ ವಿಕಲಚೇತನರ ಸೌಲಭ್ಯಗಳನ್ನು ಅತ್ಯಂತ ಪ್ರಾಮಾಣಿಕವಾಗಿ ಅರ್ಹರಿಗೆ ತಲುಪುವಂತಾಗಬೇಕು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಗುರುವಾರ ತಾಲೂಕು ಪಂಚಾಯತಿ ಆವರಣದಲ್ಲಿ ತಾಲ್ಲೂಕು ಪಂಚಾಯಿತಿ ಪಂಚಾಯಿತಿ ಅನಿರ್ಬಂಧಿತ ಅನುದಾನದಡಿ 16 ಜನ ವಿಕಲಚೇತನರಿಗೆ ತ್ರಿಚಕ್ರ ವಾಹನ ವಿತರಿಸಿ ಮಾತನಾಡಿದ ಅವರು,ಅಂಗವಿಕಲರು ಅಸಾಹಯಕರಲ್ಲ, ಸದೃಢರಿಗಿಂತಲೂ ವಿಶಿಷ್ಟ ಸಾಧನೆ ಮಾಡಬಲ್ಲರು. ಅವರಿಗೆ ಬೇಕಿರುವುದು ಅನುಕಂಪ ಅಲ್ಲ, ಅವಕಾಶ ಮಾತ್ರ. ದೈಹಿಕ ನ್ಯೂನ್ಯತೆಗಳಿಂದ ಎದುರಾಗುವ ವಿಕಲತೆಯನ್ನು ದೇವರ ಶಾಪ ಎಂದು ತಿಳಿಯ ಬಾರದು. ವಿಕಲತೆ ದೇಹಕ್ಕೆ ಹೊರತು ಮನಸ್ಸಿಗಲ್ಲ,ಎಂದು ತಿಳಿದುಕೊಂಡು ತಮ್ಮ ಜೀವನ ರೂಪಿಸಿಕೊಳ್ಳಬೇಕು. ವಿಶೇಷ ಅಂಗವಿಕಲತೆ ಎಂದರೆ ಅಂಗಾಂಗಗಳ ಊನ ಎಂಬುದು ವ್ಯಾಖ್ಯಾನ. ಆದರೆ, ಅಂಗವಿಕಲರ ಸಾಧನೆ ನೋಡಿದರೆ ಅವಕಾಶಗಳ ಕೊರತೆ ಎಂಬುದು ಎದ್ದು ಕಾಣುತ್ತದೆ. ವಿಶೇಷ ಚೇತನ ಮಕ್ಕಳನ್ನು ಪೋಷಿಸುವರಿಗೆ ದೇವರ ಆಶೀರ್ವಾದ ಇರುತ್ತದೆ ಎಂದರು.ವಿಶೇಷ ಚೇತನರು ಕೀಳರಿಮೆ ತೊರೆದು ಸ್ವಾವಲಂಭನೆ ಬದುಕು ನಡೆಸಬೇಕು. ಮಾರ್ಗದರ್ಶಿ ಕಾರ್ಯಕ್ರಮಗಳ ಸದ್ಬಳಕೆ ಮೂಲಕ ಆತ್ಮವಿಶ್ವಾಸ ಹೆಚ್ಚಿಸಿಕೊಂಡು ಸರ್ಕಾರಗಳ ಸೌಲಭ್ಯ ಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು. ಫಲಾನುಭವಿಗಳು ತ್ರಿ ಚಕ್ರ ವಾಹನ ಚಾಲನೆ ಮಾಡುವಾಗ ರಸ್ತೆ ನಿಯಮಗಳನ್ನು ಪಾಲಿಸಿ ಸುರಕ್ಷತೆಯಿಂದ ಚಾಲನೆ ಮಾಡುವಂತೆ ಕಿವಿಮಾತು ಹೇಳಿದರು.

ತ್ರಿ ಚಕ್ರ ವಾಹನ ಪಡೆದ ಅಂಗವಿಕಲರು ಮಾತನಾಡಿ, ಕಳೆದ ಎರಡು ಮೂರು ವರ್ಷದಿಂದ ತ್ರಿಚಕ್ರ ವಾಹನಕ್ಕೆ ಅರ್ಜಿ ಸಲ್ಲಿಸಿದ್ದೆವು ಆದರೆ ನಮಗೆ ವಾಹನ ನೀಡಲು ಹಿಂದೆ ಇದ್ದ ಜನಪ್ರತಿನಿಧಿಗಳು ಹಿಂದೇಟು ಹಾಕುತ್ತಿದ್ದರು.ಇದೀಗ ಶಾಸಕರು ನಮ್ಮ ಅರ್ಜಿಯನ್ನು ಪರಿಗಣಿಸಿ ತ್ರಿ ಚಕ್ರ ವಾಹನ ನೀಡಿದ್ದಾರೆ ಎಂದು ಶಾಸಕರಿಗೆ ಸನ್ಮಾನಿಸಿ ಅಭಿನಂದನೆ ಸಲ್ಲಿಸಿದರು..

ಈ ಸಂಧರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸುಬ್ರಮಣ್ಯ, ತಾಲ್ಲೂಕು ಬಿಜೆಪಿ ಕಾರ್ಯದರ್ಶಿ ಕೃಷ್ಣ ಮೂರ್ತಿ ಮುಖಂಡರಾದ, ರೇಣುಕಾ ಪ್ರಸಾದ್, ಕಣಗಾಲು ಲೋಕೇಶ್, ನವೀನ್ ಮೋಹನ್ ಕುಮಾರ್, ಪೂವಯ್ಯ, ಬೈರಾಪುರ ಗಣೇಶ್ ಸೇರಿದಂತೆ ಫಲಾನುಭವಿಗಳು ಉಪಸ್ಥಿತರಿದ್ದರು.

ವರದಿ: ಧರಣೇಂದ್ರ ಹೆಚ್.ಎಂ ಆಲೂರು

ದಾನಿಗಳ ಸಹಕಾರ, ಸರಕಾರದ ಅನುದಾನ ಹಾಗೂ ಕಂಪನಿಗಳ ಸಿಎಸ್‌ಆರ್ ಅನುದಾನವನ್ನು ಬಳಸಿಕೊಂಡು ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿ ಪಡಿಸಿಕೊಳ್ಳಬೇಕು: ಕೆ.ವೈ.ನಂಜೇಗೌಡ

ಮಾಲೂರು: ದಾನಿಗಳ ಸಹಕಾರ ಸರಕಾರದ ಅನುದಾನ ಹಾಗೂ ಕಂಪನಿಗಳ ಸಿಎಸ್‌ಆರ್ ಅನುದಾನವನ್ನು ಬಳಸಿಕೊಂಡು ತಾಲೂಕಿನಲ್ಲಿರುವ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸುವುದರ ಮೂಲಕ ಸರ್ಕಾರಿ ಶಾಲೆಗಳಿಗೆ ಬರುವ ಬಡ ಹಾಗೂ ಮಾಧ್ಯಮ ವರ್ಗದ ಮಕ್ಕಳ ಶಿಕ್ಷಣಕ್ಕೆ ಅನುಕೂಲ ಕಲ್ಪಿಸಲಾಗುವುದು ಎಂದು ಶಾಸಕ ಕೆ ವೈ ನಂಜೇಗೌಡ ಹೇಳಿದರು. ಮಾಲೂರು ತಾಲೂಕಿನ ತೊರ್ಕಹಳ್ಳಿ ಗ್ರಾಮದಲ್ಲಿ ಹೋಂಡಾ ಇಂಡಿಯಾ ಫೌಂಡೇಶನ್ ವತಿಯಿಂದ ಸಿ ಎಸ್



ಆರ್ ಅನುದಾನದಡಿ ನಿರ್ಮಿಸಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ನೂತನ ಕಟ್ಟಡದ ನಾಲ್ಕು ಕೊಠಡಿಗಳನ್ನು ಲೋಕರ್ಪಗೆಗೊಳಿಸಿ ಮಾತನಾಡಿದರು.

ಹೋಂಡಾ ಕಂಪನಿಯಿಂದ ಸರ್ಕಾರ ಮಾಡದ ಕೆಲಸವನ್ನು ಮಾಡಿಸಿಕೊಂಡಿದ್ದೇವೆ ನಗರದಲ್ಲಿ 8 ರಿಂದ 9 ಕೋಟಿ ವೆಚ್ಚದಲ್ಲಿ ಕ್ರೀಡಾಂಗಣ ನಿರ್ಮಿಸಿ ಕೊಟ್ಟಿದ್ದಾರೆ. ಕರೋನಾ ಸಂದರ್ಭದಲ್ಲಿ ಆಸ್ಪತ್ರೆಗೆ ಆಕ್ಸಿಜನ್ ಐಸಿಯು ಬೆಡ್‌ಗಳನ್ನು ಮಾಡಿಕೊಟ್ಟಿದ್ದಾರೆ. ಗ್ರಾಮಗಳಲ್ಲಿ ಶುದ್ಧಕುಡಿಯುವ ನೀರಿನ ಘಟಕಗಳು ಹೈಮಾಸ್ಟ್ ಲೈಟ್ ಗಳು, ಶಾಲಾ ಕೊಠಡಿಗಳನ್ನು ಸಹ ನಿರ್ಮಿಸಿ ಕೊಟ್ಟಿದ್ದಾರೆ, ಸುಮಾರು ಯೋಜನೆಗಳು ಸಿಎಸ್‌ಆರ್ ಅನುದಾನದಲ್ಲಿ ನಿರ್ಮಿಸಿ ಕೊಟ್ಟಿದ್ದಾರೆ, ಜೊತೆಗೆ ಹೊಸ ಕಂಪನಿಯು ಸಹ ಶಾಲಾ ಕಟ್ಟಡಗಳನ್ನು ನಿರ್ಮಿಸಿ ಕೊಟ್ಟಿದ್ದಾರೆ ಒಂದೇ ಕಾಂಪೌಂಡ್ ಅಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಪ್ರೌಢಶಾಲೆಗಳನ್ನು ನಿರ್ಮಾಣ ಮಾಡಬಹುದಾಗಿದೆ. ಇಲ್ಲಿನ ರಮಾ ಮಾಧವ ಅನುದಾನಿತ ಶಾಲೆ ಸರ್ಕಾರಿ ಶಾಲೆಯಾಗಿ ಪರಿವರ್ತನೆ ಮಾಡಿ ಎಲ್‌ಕೆಜಿ ಯಿಂದ 10ನೇ ತರಗತಿವರೆಗೂ ಆರಂಭಿಸಲು ಶಿಕ್ಷಣ ಸಚಿವರ ಬಳಿ ಚರ್ಚಿಸಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಅಶ್ವಥಮ್ಮ ರಾಮಯ್ಯ, ತಹಶೀಲ್ದಾರ್ ಎಂ.ವಿ.ರೂಪಾ, ಹೋಂಡಾ ಇಂಡಿಯಾ ಫೌಂಡೇಶನ್‌ನ ಆಪರೇಟರ್ ಆಫೀಸರ್ ಸುನಿಲ್ ಕುಮಾರ್ ನಿತ್ತಾಲ್, ಎಚ್ ಆರ್ ಜಯಂತ ಶೆಟ್ಟಿ, ರಾಘವೇಂದ್ರ ಪೂಜಾರಿ, ಮಲ್ಲಿಕಾರ್ಜುನ್, ಬಿ ಟಿ. ಬಿ.ಸಿ.ಕೆಂಪಯ್ಯ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಅಂಜಿನಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ ಕೃಷ್ಣಪ್ಪ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಷಣ್ಮುಖಿಯ್ಯ ಇತರರು ಇದ್ದರು.

ಗಂಧದ ಎಣ್ಣೆ ಖರೀದಿಯಲ್ಲಿ ಭಾರಿ ಭ್ರಷ್ಟಾಚಾರ ಅಂಕಿ ಅಂಶಗಳ ಸಮೇತ ಬಯಲಿಗೆಳೆದ ಜೆಡಿಎಸ್ ಶಾಸಕ ಹೆಚ್.ಟಿ.ಮಂಜು

ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತದಲ್ಲಿ ಗಂಧದ ಎಣ್ಣೆ ಖರೀದಿಯಲ್ಲಿ ಭ್ರಷ್ಟಾಚಾರ ಆಗಿದೆ ಎಂದು ಜೆಡಿಎಸ್ ಶಾಸಕ ಹೆಚ್.ಟಿ ಮಂಜು ಸರ್ಕಾರದ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. ಕೆಎಸ್‌ಡಿಎಲ್‌ನಲ್ಲಿ ಸಾಬೂನು ತೈಲ ಕಚ್ಚಾ ಸಾಮಾಗ್ರಿಗಳ ಖರೀದಿಯಲ್ಲಿ ಭ್ರಷ್ಟಾಚಾರ ನಡೆದಿದೆ.ಕಂಪನಿಗೆ ಮಾಹಿತಿ ಕೇಳಿ ಪತ್ರ ಬರೆದಿದ್ದು, ಯಾವುದೇ ಮಾಹಿತಿ ನೀಡಿಲ್ಲ ಎಂದು ಹೇಳಿದ್ದಾರೆ.

ಗಂಧದ ಎಣ್ಣೆ ಖರೀದಿಯಲ್ಲಿ ಭ್ರಷ್ಟಾಚಾರ ಆಗಿದೆ : ವಿಧಾನಸೌಧದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜೆಡಿಎಸ್ ಶಾಸಕ ಹೆಚ್.ಟಿ ಮಂಜು, ಗಂಧದ ಎಣ್ಣೆ ಖರೀದಿಯಲ್ಲಿ ಭ್ರಷ್ಟಾಚಾರ ಆಗಿದೆ. 800 ಪುಟಗಳ ವರದಿಯನ್ನು ಪಡೆದಿದ್ದೇವೆ. 9 ಟೆಂಡರ್ ದಾಖಲೆಗಳು ಮಾತ್ರ ಸಿಕ್ಕಿವೆ. ಸರ್ಕಾರದ ಮುಖ್ಯಕಾರ್ಯದರ್ಶಿ, ಇಲಾಖೆಯ ಸಚಿವರು, ಸಿಎಂಗೆ ಪತ್ರ ಬರೆದಿದ್ದು, ಯಾರೂಬ್ಬರೂ ಈವರೆಗೆ ಉತ್ತರ ನೀಡಿಲ್ಲ ಎಂದಿದ್ದಾರೆ.

ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ 1918ರಲ್ಲಿ ಆರಂಭವಾದ ಸಂಸ್ಥೆ.



1500 ಕೋಟಿ ರೂ ಶೇವಣಿಯ ಹಣ ಕೊಟ್ಟಿದ್ದಾರೆ. ನಕಲಿ ದಾಖಲೆ ಮಾಡಿ ಕೊಟ್ಟಿದ್ದಾರೆ. ಮಾರಾಟವಾಗಿಲ್ಲ ಅಂತ 40% ರಿಯಾಯಿತಿಗೆ ಮಾರಾಟ ಮಾಡಿದ್ದಾರೆ ಎಂದು ಹೇಳಿದ್ದಾರೆ.

ಬ್ಲಾಕ್ ಲಿಸ್ಟ್‌ಗೆ ಸೇರಿದ ಕಂಪನಿಗೆ ಟೆಂಡರ್ ಬ್ಲಾಕ್ ಲಿಸ್ಟ್‌ಗೆ ಸೇರಿಸಿರುವ ಕರ್ನಾಟಕ ಆರೋಮಾಸ್ ಎಂಬ ಕಂಪನಿಗೆ ಟೆಂಡರ್ ಕೊಡುತ್ತಾರೆ. ಟೆಂಡರ್‌ನಲ್ಲಿ ಪಾಲಿಸಬೇಕಾದ ನಿಯಮ ಪಾಲಿಸಿಲ್ಲ. ಹೊರಗಡೆಯಿಂದ ಆಮದು ಮಾಡಿಕೊಳ್ಳುತ್ತಿದ್ದೇವೆ ಅಂತಾರೆ ಆದರೆ ದಾಖಲೆ ನೀಡುತ್ತಿಲ್ಲ. ಇಲ್ಲಿನ ಎಣ್ಣೆಯನ್ನೇ ಖರೀದಿ ಮಾಡಿದ್ದಾರೆ. ಯಾವುದೇ ಉಖಖಿ ಕಟ್ಟಿಲ್ಲ. 2025ರ ಮೇ ತಿಂಗಳನಲ್ಲಿ ನಾನು ಪತ್ರ ಬರೆದಿದ್ದೆ. ಆಗ 1ಕೆ.ಜಿ ಗಂಧದ ಎಣ್ಣೆಗೆ 2 ಲಕ್ಷ 24 ಸಾವಿರ ರೂ. ಇತ್ತು. 7500 ಮೆಟ್ರಿಕ್ ಟನ್?ಗೆ 93,116 ರೂ. ಟೆಂಡರ್ ಕೊಡುತ್ತಾರೆ. 17 ಸಾವಿರ ಕೋಟಿ ರೂ. ವ್ಯತ್ಯಾಸ ಬರುತ್ತಿದೆ. ಈ ವರ್ಷ ಗಂಧದ ಎಣ್ಣೆಯ ದರ ಕೆ.ಜಿಗೆ 93 ಸಾವಿರ ರೂ ಮಾತ್ರ, ಅಷ್ಟು ವ್ಯತ್ಯಾಸ ಏಕೆ ಬರುತ್ತೆ ಎಂದು ಶಾಸಕ ಹೆಚ್.ಟಿ ಮಂಜು ಪ್ರಶ್ನಿಸಿದ್ದಾರೆ.

ಟೆಂಡರ್ ಪೂರ್ವ ಪರಿಶೀಲನಾ ಸಮಿತಿ ಮಾರುಕಟ್ಟೆ ಮೌಲ್ಯ ಪರಿಶೀಲನೆ ಮಾಡಬೇಕು. ಅವರ ಅನುಮೋದನೆ ಪಡೆದು ಟೆಂಡರ್ ಕರೆಯಬೇಕು.

570 ಕೋಟಿ ರೂ ಟೆಂಡರ್ ಆಗುತ್ತೆ. ದೂರವಾಣಿ ಮುಖಾಂತರ ಸಂಧಾನ ಮಾಡುವ ಪ್ರಯತ್ನ ವ್ಯವಸ್ಥಾಪಕ ನಿರ್ದೇಶಕ ಮಾಡುತ್ತಾರೆ. ದರ ಸಂಧಾನ ಮಾಡಿಲ್ಲ. ಒಂದೇ ವರ್ಷದಲ್ಲಿ ಮೂರು ರೀತಿಯ ಆಡಿಟ್ ವರದಿಯನ್ನು ತರಿಸಿಕೊಳ್ಳುತ್ತಾರೆ. ಅದೇ ವ್ಯಕ್ತಿ ಬೇರೆ ಕಂಪನಿಯ ಹೆಸರಿಗೆ ಟೆಂಡರ್ ಕೊಟ್ಟಿದ್ದಾರೆ ಎಂದು ಆರೋಪಿಸಿದ್ದಾರೆ.

ಒದ್ದು ಒಳಗೆ ಹಾಕುತ್ತೇನೆ ಎಂದ ಸಚಿವ ಎಂಬಿ ಪಾಟೀಲ್ : ಈ ಕುರಿತಾಗಿ ಸಚಿವ ಎಂಬಿ ಪಾಟೀಲ್ ಪ್ರತಿಕ್ರಿಯಿಸಿದ್ದು, ನಾನು ನೋಡಿಲ್ಲ, ತಿಳಿದುಕೊಳ್ಳುತ್ತೇನೆ. ಅದಕ್ಕೆ ಸ್ಪಷ್ಟೀಕರಣ ಕೊಡುತ್ತೇವೆ. ಅವ್ಯವಹಾರ ಆಗಿದ್ದರೆ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳುತ್ತೇವೆ. ತಿಮಿಂಗಲು ಇದ್ದಾವೆ, ಅವೆಲ್ಲಾ ಈ ರೀತಿ ಆರೋಪ ಮಾಡುತ್ತಿದ್ದಾರೆ. ಯಾರು ಆರೋಪ ಮಾಡಿದ್ದಾರೆ ಅನ್ನೋದನ್ನ ಹೇಳಿದರೆ ಒದ್ದು ಒಳಗೆ ಹಾಕುತ್ತೇನೆ ಎಂದಿದ್ದಾರೆ.

ಸಂಪೂರ್ಣ ಮಾಹಿತಿ ಕೊಡುತ್ತೇವೆ. ಬೇಜವಾಬ್ದಾರಿಯಂತೆ ಆರೋಪ ಮಾಡಿದರೆ ಮಾನನಷ್ಟ ಕ್ರಮ ತೆಗೆದುಕೊಳ್ಳುತ್ತೇವೆ. ಯಾವ ರೀತಿ ಕೆಎಸ್‌ಡಿಎಲ್ ಬೆಳೆಯುತ್ತಿದೆ ಎನ್ನುವುದು ನಿಮಗೆ ಗೊತ್ತು. ಟೆಂಡರ್‌ನಲ್ಲಿ ಅವ್ಯವಹಾರ ಆಗಿದ್ದರೆ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ. ಅವರ ಆರೋಜಕ್ಕೆ ನಾನು ಉತ್ತರ ಕೊಡುತ್ತೇವೆ ಎಂದು ಹೇಳಿದ್ದಾರೆ.

ವರದಿ: ಜನಾರ್ಧನ ಹೂತಗೆರೆ

ಇ-ಪೇಪರ್: www.munjanevarthe.com

ಪಡಗೂರು ಗ್ರಾಮ ಪಂಚಾಯತಿ ಅಧ್ಯಕ್ಷೆ ಸದಸ್ಯತ್ವ ರದ್ದು

ಗುಂಡ್ಲುಪೇಟೆ: ಪಡಗೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸುಮ ಅವರ ಸದಸ್ಯತ್ವ ರದ್ದು ಹಾಗೂ ಮುಂದಿನ ಆರು ವರ್ಷಗಳ ಚುನಾವಣೆಯಲ್ಲಿ ನಿಲ್ಲದಂತೆ ಅನರ್ಹಗೊಳಿಸಿ ಆದೇಶ ಮಾಡಲಾಗಿದೆ

ಗುಂಡ್ಲುಪೇಟೆ ತಾಲ್ಲೂಕಿನ ಪಡಗೂರು ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಅವರ ಪತಿ ಕಾಳಿಂಗನಾಯಕ ಅಧ್ಯಕ್ಷರ ಕೊಠಡಿಯಲ್ಲಿ ಕುಳಿತು ಗ್ರಾಮ ಪಂಚಾಯಿತಿ ಆಡಳಿತಕ್ಕೆ ಸಂಬಂಧಿಸಿದ ಕಡತಗಳನ್ನು ಪರಿಶೀಲಿಸುವುದು ಪತ್ನಿ ಅಧ್ಯಕ್ಷೆಯ ಬದಲು ತಾವೇ ಅಧಿಕಾರವನ್ನು ಚಲಾಯಿಸುವುದು ಅಧ್ಯಕ್ಷರ ಅಧಿಕಾರ ಹಾಗೂ ಗ್ರಾಮ ಪಂಚಾಯಿತಿ ಕಾರ್ಯನಿರ್ವಹಣೆಯಲ್ಲಿ ಹಸ್ತಕ್ಷೇಪ ಮಾಡಿ ಕಾನೂನು ಉಲ್ಲಂಘನೆ ಮಾಡುತ್ತಿರುವ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ರಾಜೇಂದ್ರ ದೂರು ನೀಡಿದ್ದರು. ವಿಚಾರಣೆಯಲ್ಲಿ ಸಾಬೀತಾಗಿರುವುದರಿಂದ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ), 48(4)ರನ್ವಯ ಕ್ರಮ ಜರುಗಿಸುವಂತೆ ಕೋರಿ, ಪ್ರಾದೇಶಿಕ ಆಯುಕ್ತರು ವಿಚಾರಣಾ ವರದಿಯನ್ನು ಸಲ್ಲಿಸಿರುತ್ತಾರೆ. ಸುಮ ಅಧ್ಯಕ್ಷರು ವಿರುದ್ಧದ ಆರೋಪಗಳು ಸಾಭೀತಾಗಿರುವುದಾಗಿ ಪ್ರಾದೇಶಿಕ ಆಯುಕ್ತರು ಸಲ್ಲಿಸಿರುವ ವಿಚಾರಣಾ ವರದಿಯನ್ನು ಅಂಗೀಕರಿಸುವ ಪೂರ್ವದಲ್ಲಿ ಎದುರುದಾರರಿಗೆ ಪ್ರಾದೇಶಿಕ ಆಯುಕ್ತರು ಸಲ್ಲಿಸಿರುವ ವಿಚಾರಣಾ ವರದಿಯೊಂದಿಗೆ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು

ತಾವೇ ಅಧಿಕಾರವನ್ನು ಚಲಾಯಿಸು

ತ್ತಿರುವುದು, ಅಧ್ಯಕ್ಷರ ಅಧಿಕಾರ ಹಾಗೂ ಗ್ರಾಮ ಪಂಚಾಯಿತಿ ಕಾರ್ಯನಿರ್ವಹಣೆಯಲ್ಲಿ ಹಸ್ತಕ್ಷೇಪ ಮಾಡಿ, ಕಾನೂನು ಉಲ್ಲಂಘನೆ ಮಾಡಿರುವ ಆರೋಪಗಳು ಸಾಬೀತಾಗಿರುವುದರಿಂದ, ಸದರಿಯವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ–1993ರ ಪ್ರಕರಣ 43(ಎ) ಮತ್ತು 48(4) ಮತ್ತು (5)ರನ್ವಯ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ಮತ್ತು ಅದೇ ಪ್ರಕರಣ 43(2)ರನ್ವಯ ಮುಂದಿನ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ವರದಿ: ಮಹದೇವಪ್ರಸಾದ್ ಹಂಗಳ

ಭತ್ತ ವಹಿವಾಟು ಜೋರು: 2ನೇ ಬೆಳೆಗೆ ತುಂಗಭದ್ರಾ ನಾಲೆಗೆ ನೀರು ಹರಿಸುವಂತೆ ರೈತರ ಒತ್ತಾಯ

ರಾಯಚೂರು: ಕೃಷಿ ಮಾರುಕಟ್ಟೆಗೆ ಈಗ ಭತ್ತ ಬರುತ್ತಿದ್ದು, ವ್ಯಾಪಾರ ಜೋರಾಗಿ ನಡೆಯುತ್ತಿದೆ. ಕಳೆದ ವರ್ಷಕ್ಕಿಂತ ಹೋಲಿಸಿದರೆ ದರ ತುಸು ಹೆಚ್ಚಳವಾಗಿದೆ. ಈಗಿರುವ ಭತ್ತದ ಧಾರಣೆ ಏರಿಸಬೇಕು. ಜೊತೆಗೆ, ತುಂಗಭದ್ರಾ ಎಡದಂಡೆ ನಾಲೆಗೆ ಎರಡನೇ ಬೆಳೆಗೆ ನೀರು ಹರಿಸಬೇಕೆನ್ನುವ ಒತ್ತಾಯ ರೈತರಿಂದ ಕೇಳಿ ಬಂದಿದೆ.

ಪ್ರಸ್ತುತ ವರ್ಷದ ಮುಂಗಾರು ಹಂಗಾಮಿನಲ್ಲಿ ಉತ್ತಮ ಮಳೆ ಸುರಿದಿದೆ. ಹೀಗಾಗಿ ಬಹುತೇಕ ಜಲಾಶಯಗಳು ಭರ್ತಿಯಾಗಿ ರೈತರ ಮೊಗದಲ್ಲಿ ಮಂದಹಾಸ ಮೂಡಿಸಿತ್ತು. ಮುಖ್ಯವಾಗಿ ನೀರಾವರಿ ಪ್ರದೇಶದಲ್ಲಿ ಒಳ್ಳೆಯ ಇಳುವರಿ ಬಂದಿದ್ದು, ಕೃಷಿ ಉತ್ಪನ್ನ ಮಾರುಕಟ್ಟೆ ವರ್ಷಕರ ಅಂಗಡಿಗಳಿಗೆ ಹಾಗೂ ರೈಸ್ ಮಿಲ್‌ಗಳಿಗೆ ಮಾರಾಟ ಮಾಡುತ್ತಿದ್ದಾರೆ. ರಾಯಚೂರುನಲ್ಲಿ ಮಾರುಕಟ್ಟೆಯಲ್ಲಿ ಕ್ವಿಂಟಾಲ್‌ಗೆ 1,900 ರಿಂದ 2,800